# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 40 | FRIDAY 17-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಮುಖ್ಯಮಂತ್ರಿಯಾಗಿ ಎರಡನೇ ಅವಧಿಯಲ್ಲಿ ಅಹಿಂದ ಬಗ್ಗೆ ಒಲವು ತೋರದ ಸಿದ್ದರಾಮಯ್ಯ: 'ಅಹಿಂದ' ಚಾಂಪಿಯನ್ 'ಕೈ' ಕಟ್ಟಿ ಹಾಕಿದ ಶಕ್ತಿ ಯಾವುದು?

ಬೆಂಗಳೂರು: ಸಿದ್ದರಾಮಯ್ಯ ಎರಡನೇ ಅವಧಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಅಹಿಂದ ಸಮುದಾಯಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ನಿಭಾಯಿಸುವಲ್ಲಿ ವಿಫಲರಾಗಿದ್ದಾರೆಯೇ? ಎಂಬ ಪ್ರಶ್ನೆ ಮೂಡಿದೆ.

ಮಾಜಿ ಸಚಿವ ಎಚ್. ಆಂಜನೇಯ ಅವರಂತಹ ಅವರ ನಿಷ್ಠಾವಂತರು ಸಹ ಅವರ ಮೊದಲ ಅವಧಿಗೆ ಹೋಲಿಸಿದರೆ ಅವರ ಕಾರ್ಯಶೈಲಿಯಲ್ಲಿನ ಬದಲಾವಣೆಯನ್ನು ಒಪ್ಪಿಕೊಂಡಿದ್ದಾರೆ. ಅನೇಕ ಶಕ್ತಿ ಕೇಂದ್ರಗಳ ಮುಖ್ಯಮಂತ್ರಿಯ ಕೈಗಳನ್ನು ಕಟ್ಟಿಹಾಕಿದೆ ಎಂದು ಅವರು ಹೇಳುತ್ತಾರೆ.



ದಾವಣಗೆರೆ ದಕ್ಷಿಣ ಉಪಚುನಾವಣೆಗೆ ಸಂಬಂಧಿಸಿದ ಬೆಳವಣಿಗೆಗಳು, ಸಮುದಾಯದ ಸದಸ್ಯರಿಗೆ ಪಕ್ಷದ ಟಿಕೆಟ್ ನೀಡುವ ವಿಷಯದಲ್ಲಿ ಮುಸ್ಲಿಮರು ಸೇರಿದಂತೆ ಅವರ ನಾಯಕರು ವಿಭಜನೆಗೊಂಡಿದ್ದಾರೆ ಎಂದು ಸೂಚಿಸುತ್ತದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯ ಪಟ್ಟಿದ್ದಾರೆ. 2028 ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ, ಮುಸ್ಲಿಮರು ಪಕ್ಷಗಳ ನಡುವೆ ವಿಭಜನೆಯಾಗುವ ಸಾಧ್ಯತೆಯಿದೆ, ಇದರಿಂದಾಗಿ ಕಾಂಗ್ರೆಸ್‌ಗೆ ಕಷ್ಟವಾಗುತ್ತದೆ ಎಂದು ಅವರು ಹೇಳಿದರು.

ಏತನ್ಮಧ್ಯೆ, ಕಾಂಗ್ರೆಸ್‌ನೊಳಗಿನ ಎಸ್‌ಸಿ ಸಮುದಾಯದ ನಾಯಕರು ಸಹ ಆಂತರಿಕ ಕೋಟಾದ ವಿಷಯದ ಬಗ್ಗೆ ಭಿನ್ನಾಭಿಪ್ರಾಯ ಹೊಂದಿದ್ದಾರೆ. ಡಾ. ಜಿ. ಪರಮೇಶ್ವರ, ಡಾ. ಎಚ್.ಸಿ. ಮಹಾದೇವಪ್ಪ ಮತ್ತು ಪ್ರಿಯಾಂಕ್ ಖರ್ಗೆ ಸೇರಿದಂತೆ ಎಸ್‌ಸಿ ಬಲ ಜಾತಿಗೆ ಸೇರಿದ ಸಚಿವರು ಮತ್ತು ಕೆ.ಎಚ್. ಮುನಿಯಪ್ಪ ಮತ್ತು ಆರ್. ಬಿ. ತಿಮ್ಮಾಪುರ ಸೇರಿದಂತೆ ಎಡಪಂಥೀಯರು ಭಿನ್ನಾಭಿಪ್ರಾಯ ಹೊಂದಿದ್ದಾರೆ ಎನ್ನಲಾಗಿದೆ.

ನ್ಯಾಯಮೂರ್ತಿ ಎಚ್. ಎನ್. ಮೋಹಮೋಹನ್ ದಾಸ್ ಆಯೋಗದ ವರದಿಯು ಆಂತರಿಕ ಕೋಟಾ ಅನುಷ್ಠಾನವನ್ನು ಎಸ್‌ಸಿ ಭೋವಿ ಮತ್ತು ಲಂಬಾಣಿ ನಾಯಕರು ವಿರೋಧಿಸುತ್ತಿದ್ದಾರೆ ಏಕೆಂದರೆ ಅದು ಬಲ ಮತ್ತು ಎಡ ಜಾತಿಗಳಿಗೆ ತಲಾ 6% ಮತ್ತು ಉಳಿದ 5% ಅನ್ನು ಇತರರಿಗೆ ಹಂಚಿಕೆ ಮಾಡಲು ತಿದ್ದುಪಡಿ ಮಾಡಿದೆ.

ಸರ್ಕಾರವು 56,432 ಖಾಲಿ ಹುದ್ದೆಗಳನ್ನು ಹಿಂದಿನ ಪದ್ಧತಿಯಂತೆ ಅಂದರೆ ಶೇ. 15 ಕೋಟಾದ ಪ್ರಕಾರ, ಆಂತರಿಕ ಕೋಟಾ ಇಲ್ಲದೆ ಭರ್ತಿ ಮಾಡಲು ಸಿದ್ಧವಾಗುತ್ತಿದ್ದಂತೆ, ಎಸ್‌ಸಿ ಎಡ ಜಾತಿ ಸದಸ್ಯರ ಆಕ್ರೋಶಕ್ಕೆ ಗುರಿಯಾಯಿತು. ಅವರಲ್ಲಿ ಒಂದು ವರ್ಗವು ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಉಪಚುನಾವಣೆಯ ಸಮಯದಲ್ಲಿ ಕಾಂಗ್ರೆಸ್ ವಿರುದ್ಧ ಪ್ರಚಾರ ಮಾಡಿತು ಎಂದು ಆರೋಪಿಸಲಾಗಿದೆ.

ಏತನ್ಮಧ್ಯೆ, ಸಿದ್ದರಾಮಯ್ಯ ಅವರು ಕಾಂತರಾಜು ಆಯೋಗದ ಸಾಮಾಜಿಕ ಆರ್ಥಿಕ ಶಿಕ್ಷಣ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಕಾರ್ಯಗತಗೊಳಿಸಲು ವಿಫಲರಾಗಿದ್ದಾರೆ ಎಂದು ಆರೋಪಿಸಲಾಗಿದೆ ಏಕೆಂದರೆ ಪಕ್ಷದ ಹೈಕಮಾಂಡ್ ಮಧ್ಯಪ್ರವೇಶಿಸಿ ಹೊಸ ಸಮೀಕ್ಷೆಯನ್ನು ಸೂಚಿಸಿತು.

ಐದು ರಾಜ್ಯಗಳ ವಿಧಾನಸಭೆಗಳ ಫಲಿತಾಂಶಗಳು ಮತ್ತು ಮೇ 4 ರಂದು ಉಪಚುನಾವಣೆ ಫಲಿತಾಂಶ ಪ್ರಕಟವಾದ ನಂತರ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸಿದ ಹೊಸ ಸಮೀಕ್ಷೆಯನ್ನು ಅವರು ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

2028 ರ ವಿಧಾನಸಭಾ ಚುನಾವಣೆಯಲ್ಲಿ ಅಹಿಂದವು ಪ್ರಸ್ತುತವಾಗುವ ಸಾಧ್ಯತೆಯಿಲ್ಲ ಏಕೆಂದರೆ ಸಿದ್ದರಾಮಯ್ಯ ಅವರು ಪಕ್ಷದ ಮುಖ್ಯಮಂತ್ರಿ ಅಭ್ಯರ್ಥಿಯಾಗಿಲ್ಲದಿರಬಹುದು ಎಂದು ವಿಶ್ಲೇಷಕರು ಹೇಳಿದ್ದಾರೆ.

ಮುಡಾ ಹಗರಣ ಮತ್ತು ಮಹರ್ಷಿ ವಾಲ್ಮೀಕಿ ಎಸ್‌ಟಿ ನಿಗಮದಲ್ಲಿ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದ ವಿಷಯಗಳನ್ನು ಎತ್ತಿದ್ದ ಬಿಜೆಪಿ, ಹಿಂದುಳಿದ ವರ್ಗಗಳು ಮತ್ತು ಎಸ್‌ಸಿ/ಎಸ್‌ಟಿಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಿದ್ದರಾಮಯ್ಯ ವಿಫಲರಾಗಿದ್ದಾರೆ ಎಂಬ ಆರೋಪದ ಬಗ್ಗೆಯೂ ಚರ್ಚಿಸುವ ಸಾಧ್ಯತೆಯಿದೆ.

## ವಿರೋಧಿ ಬಣದ ನಾಯಕರನ್ನು ಹೊಂಚುಹಾಕಿ, ಸಂಚು ರೂಪಿಸಿ ಒಬ್ಬೊಬ್ಬರನ್ನೇ ಮುಗಿಸುತ್ತಿದ್ದಾರೆ: ಡಿಕೆಶಿ ವಿರುದ್ಧ JDS ಕಿಡಿ



ಬೆಂಗಳೂರು: ಕುರ್ಚಿ ಆಸೆಗಾಗಿ ತಮ್ಮ ವಿರೋಧಿ ಬಣದ ನಾಯಕರನ್ನು ಹೊಂಚು ಹಾಕಿ, ಸಂಚು ರೂಪಿಸಿ ಒಬ್ಬೊಬ್ಬರನ್ನೇ ಮುಗಿಸುತ್ತಿದ್ದಾರೆಂದು ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ವಿರುದ್ಧ ಜೆಡಿಎಸ್ ಕಿಡಿಕಾರಿದೆ.

ಮುಸ್ಲಿಂ ನಾಯಕರನ್ನು ಅವಮಾನತುಗೊಳಿಸಿರುವ ವಿಚಾರವಾಗಿ ಸಾಮಾಜಿಕ ಜಾಲತಾಣದಲ್ಲಿ ಜೆಡಿಎಸ್ ಪೋಸ್ಟ್ ಮಾಡಿದ್ದು, ತೀವ್ರವಾಗಿ ಕಿಡಿಕಾರಿದೆ.

ಕಾಂಗ್ರೆಸ್ ಪಕ್ಷದಲ್ಲಿ ಸಾಮಾಜಿಕ ಅನ್ಯಾಯ ನಡೆಯುತ್ತಿದೆ. ಅಂದು ಪರಿಶಿಷ್ಟ ಸಮುದಾಯದ ವಾಲ್ಮೀಕಿ ಜನಾಂಗದ ನಾಯಕ ಕೆ.ಎನ್. ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ಏಕಾಏಕಿ ಕಿತ್ತು ಹಾಕಲಾಯಿತು. ಇಂದು ಅಲ್ಪಸಂಖ್ಯಾತ ಸಮುದಾಯದ ಮುಖಂಡ ಅಬ್ದುಲ್ ಜಬ್ಬರ್ ಅವರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ.

ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವ ವಿಚಾರದಲ್ಲಿ ಎಲ್ಲವೂ ಸರಿಯಲ್ಲ. ಕುರ್ಚಿ ಆಸೆಗಾಗಿ ಡಿಕೆ.ಶಿವಕುಮಾರ್ ತಮ್ಮ ವಿರೋಧಿ ಬಣದ ನಾಯಕರನ್ನು ಹೊಂಚುಹಾಕಿ, ಸಂಚು ರೂಪಿಸಿ ಒಬ್ಬೊಬ್ಬರನ್ನೇ ಮುಗಿಸುತ್ತಿದ್ದಾರೆಂದು ಆರೋಪಿಸಿದೆ.

ಅಧ್ಯಕ್ಷರು ತಪ್ಪು ಮಾಡಿದರೆ ಕೇವಲ ಕ್ಷಮೆ ಕೇಳಿದರೆ ಸಾಕು, ಆದರೆ ಪರಿಶಿಷ್ಟ ಮತ್ತು ಅಲ್ಪಸಂಖ್ಯಾತ ನಾಯಕರಿಗೆ ಮಾತ್ರ ವಜಾ ಮತ್ತು ಉಚ್ಚಾಟನೆಯ ಶಿಕ್ಷೆ ನೀಡುತ್ತಾರೆ. ಹಣಬಲ, ತೋಳ್ಬಲದಿಂದ ಮೆರೆಯುತ್ತಿರುವ ಡಿಕೆಶಿ ಸ್ವಾರ್ಥಕ್ಕೆ ಕಾಂಗ್ರೆಸ್‌ಗಾಗಿ ದುಡಿದ ತಳಮಟ್ಟದ ದಲಿತ ಮತ್ತು ಹಿಂದುಳಿದ ವರ್ಗಗಳ ನಾಯಕರನ್ನು ಗುರಿಯಾಗಿಸಿ, ಅವರ ರಾಜಕೀಯ ಭವಿಷ್ಯಕ್ಕೆ ಕೊಳ್ಳಿ ಇಡುತ್ತಿದ್ದಾರೆ. ಇದು ಕಾಂಗ್ರೆಸ್‌ನ ಅಸಲಿ ಮುಖ ಎಂದು ಟೀಕೆ ಮಾಡಿದೆ.

## ಪ್ರವಚನ ಕಾರ್ಯಕ್ರಮ; ಶಂಕರ ಕೋಳಿವಾಡ ಅವರಿಗೆ ಸನ್ಮಾನ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಲಿಂಗಾಯತ ಧರ್ಮ ಮಹಾಸಭಾದ ವತಿಯಿಂದ ನವನಗರದ ಈಶ್ವರ ದೇವಸ್ಥಾನದಲ್ಲಿ ಆಯೋಜಿಸಿದ್ದ ಕಲ್ಯಾಣದಿಂದ ಉಳವಿಗೆ ಪ್ರವಚನದ ಕಾರ್ಯಕ್ರಮದಲ್ಲಿ ಉದ್ಯಮಿ, ಕೋಳಿವಾಡ ಮಾರ್ಬಲ್ಸ & ಗ್ರಾನೈಟ್ಸ ಮಾಲಿಕರಾದ ಶಂಕರ ಕೋಳಿವಾಡ ಅವರನ್ನು ಆತ್ಮೀಯವಾಗಿ ಗೌರವಿಸಲಾಯಿತು.

ಖ್ಯಾತ ಪ್ರವಚನಕಾರರಾದ ಮುಮ್ಮಿಗಟ್ಟಿಯ ಶಿವಯೋಗಾಶ್ರಮ ಹಾಗೂ ಬೆಳ್ಳೇರಿಯ ಶ್ರೀ ಶಿವಾನಂದಮಠದ ಪರಮ ಪೂಜ್ಯರು, ನಿಸರ್ಗ ಚಿಕಿತ್ಸಾ ತಜ್ಞರಾದ ಪೂಜ್ಯಶ್ರೀ ಡಾ ಬಸವಾನಂದ ಸ್ವಾಮೀಜಿಯವರು.

ಹಿರಿಯರಾದ ಪ್ರಭು ರೋಣದ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಚಂದ್ರಶೇಖರ ತೊನ್ನಿ , ಕೆ. ಎಸ್. ಕೊರಿಶೆಟ್ಟರ್, ಬಿ ಜಿ ಹೊಸಗೌಡರ , ನವನಗರ ನಿವಾಸಿಗಳ ಹಿತೋದ್ಧಾರಕ ಸಂಘದ ಬಸವರಾಜ ಪಾಟೀಲ , ಮಹಾರುದ್ರಲಿಂಗ ಪಟ್ಟಣಶೆಟ್ಟಿ , ಲಿಂಗಾಯತ ಧರ್ಮ ಮಹಾಸಭಾದ ತಾಲೂಕಾಧ್ಯಕ್ಷ ಮನೋಹರ ಜಮಖಂಡಿ , ಎಸ್ ವಿ ಸಾವಕಾರ, ಚೇತನ , ಮುಂತಾದವರು ಇದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ನಗರದ ಕೆಎಲ್‌ಇ ಸಂಸ್ಥೆಯ ಸಿ ಎಸ್ ಅಂಗಡಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಡಾ.ಬಿ ಆರ್ ಅಂಬೇಡ್ಕರ ಅವರ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಜಿ ಎಮ್ ಅಂದಾನಿ, ಪ್ರಾಚಾರ್ಯರುಗಳಾದ ಎಮ್ ಎನ್ ಕೌಜಲಗಿ, ಎಮ್ ಎ ಪಾಟೀಲ, ಪ್ರಶಾಂತ ಕಿವಟಿ, ಅರ್ಜುನಸಿಂಗ ಹಜಾರೆ ಇದ್ದರು.

## ಬಸವ ಜಯಂತಿ ಉತ್ಸವ ಪ್ರಯುಕ್ತ 19 ರಂದು "ಸಮಾನತೆಗಾಗಿ" ಬೃಹತ್ ಬೈಕ್ ರ್ಯಾಲಿ



**ಬೆಳಗಾವಿ ವಾರ್ತೆ ಬೆಳಗಾವಿ:** ಬಸವ ಜಯಂತಿ ನಿಮಿತ್ತ ಇದೆ ರವಿವಾರ ದಿನಾಂಕ 19 ರಂದು ಬೃಹತ್ ಬೈಕ್ ರ್ಯಾಲಿಯನ್ನು ಬೆಳಗಾವಿ ಮಹಾನಗರದಲ್ಲಿ ಆಯೋಜಿಸಲಾಗಿದೆ ಎಂದು ಬಸವ ಜಯಂತಿ ಉತ್ಸವ-2026 ಸಮಿತಿಯ ಸಂಚಾಲಕ ಬಸವರಾಜ ರೊಟ್ಟಿ ಹೇಳಿದರು.

ಪತ್ರಿಕಾ ಪರಿಷತ್ತಿನಲ್ಲಿ ಮಾತನಾಡಿದ ಅವರಿಂದು ಬೆಳಗಿನ 8:00 ಗಂಟೆಗೆ ಶಹಾಪೂರ ಗೋವಾವೇಸ ಬಸವೇಶ್ವರ ಸರ್ಕಲ್‌ದಿಂದ ಆರಂಭವಾಗುವ ಈ ರ್ಯಾಲಿಯಲ್ಲಿ ಸುಮಾರು 2 ಸಾವಿರಕ್ಕೂ ಅಧಿಕ ಬೈಕ್ ಗಳು ಮತ್ತು ಕಾರುಗಳು ಭಾಗಿಯಾಗಲಿವೆ. ಬಸವಣ್ಣನವರು ಸಾರಿದ ಸಮಾನತೆಗಾಗಿ ಈ ರ್ಯಾಲಿಯನ್ನು ಆಯೋಜಿಸಲಾಗಿದ್ದು ಸಮಾಜದ ಸಮಸ್ತ ಜನ ಇದರಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದವರು ವಿನಂತಿಸಿದರು.

ಬೆಳಗಾವಿಯ ನಾಗನೂರು ರುದ್ರಾಕ್ಷಿ ಮಠದ ಪೀಠಾಧಿಕಾರಿ ಡಾ. ಅಲ್ಲಮಪ್ರಭು ಮಹಸ್ವಾಮೀಜಿಯವರು, ಬೆಳಗಾವಿಯ ಸಂಸದ ಜಗದೀಶ್ ಶೆಟ್ಟರ್ , ಕೆಎ ಸಂಸ್ಥೆಯ ಗೌರವ ಕಾರ್ಯಧ್ಯಕ್ಷ ಡಾ. ಪ್ರಭಾಕರ್ ಕೋರೆ ಅವರುಗಳು ಚಾಲನೆ ನೀಡಲಿದ್ದಾರೆ. ಬೆಳಗಾವಿಯ ಮಹಾಪೌರ ಶ್ರೀಮತಿ. ಪ್ರೀತಿ ಕಾಮಕರ್, ಉಪಮಹಾಪೌರ ಹನುಮಂತ ಕೊಂಗಾಲಿ, ಶಾಸಕರಾದ ಅಭಯ್ ಪಾಟೀಲ್, ರಾಜು ಸೇಠ ಮತ್ತು ನಗರ ಸೇವಕರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದವರು ವಿವರಿಸಿದರು.

ರ್ಯಾಲಿಯೂ ಬಸವೇಶ್ವರ ಸರ್ಕಲದಿಂದ ಆರಂಭವಾಗಿ ತಿಳಕವಾಡಿ, ಅನುಗೋಳ, ವಡಗಾವ್ ,ಖಾಸಬಾಗ್, ಶಹಪುರ್ , ಕಪಿಲೇಶ್ವರ ರೋಡ್, ಕರ್ನಾಟಕ ಚೌಕ್, ರವಿವಾರಪೇಟೆ, ಖಡೆ ಬಾಜಾರ್, ಮಾರುತಿ ಗಲ್ಲಿ , ರಾಮದೇವ್ ಗಲ್ಲಿ, ಕಾಲೇಜು ರಸ್ತೆ , ಚೆನ್ನಮ್ಮ ಸರ್ಕಲ್, ಸಿವಿಲ್ ಆಸ್ಪತ್ರೆ, ಆರ್.ಎನ್. ಶೆಟ್ಟಿ ಪಾಲಿಟೆಕ್ನಿಕ್ ಕಾಲೇಜು ರಸ್ತೆ , ಲಿಂಗಾಯಿತ ಭವನ, ಶ್ರೀನಗರ ಗಾರ್ಡನ್, ರಾಣಿ ಚೆನ್ನಮ್ಮ ಸೊಸೈಟಿ, ಸಾಯಿ ಮಂದಿರ, ಬಾಲ ಭವನ, ಲೌಡೇಲ ಸ್ಕೂಲ್, ಮಹಾಂತೇಶ್ ನಗರ ಬಸ್ ನಿಲ್ದಾಣ, ಪಿ & ಟಿ ಕ್ವಾಟರ್ಸ್, ಸಿದ್ನಾಳ ಕ್ರಾಸ್ , ಕೆಎಂಎಫ್ ಡೈರಿ, ದತ್ತ ಮಂದಿರ, ಲಿಂಗಾಯಿತ ಸಂಘಟನೆ ಮೈದಾನದವರೆಗೆ ಬಂದು ಫ.ಗು. ಹಳಕಟ್ಟಿ ಭವನದಲ್ಲಿ ಕೊನೆಗೊಳ್ಳಲಿದೆ ಈ ಬೃಹತ್ ರ್ಯಾಲಿಯಲ್ಲಿ ಸಮಸ್ತ ಜನರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅವರು ವಿನಂತಿಸಿದರು.

ಪ್ರಶ್ನೆ ಒಂದಕ್ಕೆ ಉತ್ತರಿಸಿದ ಶ್ರೀಮತಿ.ರತ್ನಪ್ರಭಾ ಬೆಲ್ಲದ ಅವರು ನಾವೆಲ್ಲ ಒಂದಾಗಿದ್ದು ಬಸವಪರ ಸಂಘಟನೆಗಳೆಲ್ಲ ಸೇರಿ ಬಸವ ಜಯಂತಿ ಆಚರಿಸಲಾಗುತ್ತದೆ ಈ ವಿಷಯದಲ್ಲಿ ಯಾವುದೇ ಡನ್ನ ಅಭಿಪ್ರಾಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಪತ್ರಿಕಾ ಪರಿಷತ್ತಿನಲ್ಲಿ ಶ್ರೀಮತಿ. ರತ್ನಪ್ರಭಾ ಬೆಲ್ಲದ,ಈರಣ್ಣ ದೇಯಣ್ಣವರ್, ಕಿರಣ್ ಅಗಡಿ, ರಮೇಶ್ ತುಬಚಿ, ಶಂಕರ್ ಗುಡಸ, ಎಸ್.ಜಿ. ಸಿದ್ನಾಳ, ಆನಂದ್ ಗುಡಸ್ , ಪ್ರೇಮ ಚೌಗಲಾ , ಮನೋಹರ ಪುಡಕಲಕಟ್ಟಿ, ಬಾಲಚಂದ್ರ ಬಾಗಿ, ಅಶೋಕ್ ಬೆಂಡಿಗೇರಿ, ಮುರಗೆಪ್ಪ ಬಾಳಿ ಮತ್ತು ಸಿ.ಎಂ.ಬೂದಿಹಾಳ ಉಪಸ್ಥಿತರಿದ್ದರು.

## 'ಹೂಗಾರ' ಚಿತ್ರೀಕರಣ ಆರಂಭ

**ಬೆಳಗಾವಿ ವಾರ್ತೆ ಸಿದ್ದನಕೊಳ್ಳ :** ಬಾಗಲಕೋಟ ಜಿಲ್ಲೆಯ ಇಳಕಲ್ ತಾಲೂಕಿನ ಸುಕ್ಷೇತ್ರ ನಿರಂತರ ಅನ್ನದಾಸೋಹ ಕಲಾಪೋಷಕರಮಠ ಸಿದ್ದನಕೊಳ್ಳದ ಶ್ರೀಮಠದ ಆವರಣದಲ್ಲಿ ಧರ್ಮಾಧಿಕಾರಿಗಳಾದ ಡಾ.ಶಿವಕುಮಾರ ಸ್ವಾಮೀಜಿಗಳ ಆಶೀರ್ವಾದದಿಂದ ಕೀರ್ತನ ಮೂವಿ ಮೇಕರ್ಸ್ ಹಾಗೂ ಕೆ ಎಸ್ ಆರ್ ಪ್ರೊಡಕ್ಷನ್ ಬೆಂಗಳೂರ ಅವರ 'ಹೂಗಾರ' ಉಪ ಶೀರ್ಷಿಕೆ 'ಕಂಬದ ಮಲ್ಲ' ಎಂಬ ಕನ್ನಡ ಚಲನಚಿತ್ರದ ಮುಹೂರ್ತ ಸಮಾರಂಭ ಶ್ರೀಮಠದಲ್ಲಿ ಯಶಸ್ವಿಯಾಗಿ ನೆರವೇರಿತು.

ಡಾ.ಶಿವಕುಮಾರ ಸ್ವಾಮೀಜಿ ಮತ್ತು ಉಮೇಶ ಮೇಟಿಯವರು ಕ್ಯಾಮರಾಗುಂಡಿ ಒತ್ತುವ ಮೂಲಕ ಚಿತ್ರತಂಡಕ್ಕೆ ಶುಭ ಕೋರಿದರು. ಸಿದ್ದಾರೂಢ ಹೂಗಾರ ಕ್ಲಾಪ್ ಮಾಡುವ ಮೂಲಕ ಡಾ.ಶಿವಕುಮಾರ ಸ್ವಾಮೀಜಿಯವರ ಹಾಡಿನ ಮೊದಲ ದೃಶ್ಯಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶಿವಾನಂದ ಮುತ್ತಣ್ಣವರ, ಶಿವಾನಂದ ಮೇಟಿ ಚಿತ್ರತಂಡದವರು , ಶ್ರೀಮಠದ ಸದ್ಭಕ್ತರು ಪಾಲ್ಗೊಂಡಿದ್ದರು. ಸಿದ್ದಾರೂಢ ಹೂಗಾರ ಎಂಬ ಮಲ್ಲಕಂಬದ ಪೈಲ್ವಾನ್ ಅವರ ಜೀವನ ಆಧಾರಿತ ಚಲನಚಿತ್ರವಾಗಿದೆ. ಸಿದ್ದನಕೊಳ್ಳ ಗ್ರಾಮ ಮತ್ತು ಸಿದ್ದನಕೊಳ್ಳಮಠದಲ್ಲಿ 30 ದಿನಗಳ ಕಾಲ ಸತತ ಚಿತ್ರೀಕರಣ ನಡೆಯಲಿದೆ. ನಾಲ್ಕು ಹಾಡುಗಳು, ನಾಲ್ಕು ಸಾಹಸ ದೃಶ್ಯಗಳಿವೆ ಎಂದು ಈಗಾಗಲೇ 'ಒಬ್ಬಟ್ಟು' ಚಿತ್ರ ನಿರ್ಮಿಸಿ, ನಿರ್ದೇಶಿಸಿದ್ದ ನಿರ್ದೇಶಕ ಹಾಗೂ ನಿರ್ಮಾಪಕ ಲೋಕೇಶ್ ವಿದ್ಯಾಧರ ಹೇಳಿದರು..

ತಾರಾ ಬಳಗದಲ್ಲಿ ದಶರಥ ನಾಯಕನಾಗಿ, ಅಪೂರ್ವ ನಾಯಕಿಯಾಗಿ ಮತ್ತು ಹಿರಿತೆರೆ, ಕಿರುತೆರೆ ಧಾರಾವಾಹಿಗಳ ಕಲಾವಿದೆ ಸುನಂದಾ ಕಲ್ಬುರ್ಗಿ, ಮಹಾಂತೇಶ ಹಳ್ಳೂರ, ಸಂಗನಗೌಡ ರುದ್ರಗೌಡ್ರ (ಕುರುಡಗಿ), ಜ್ಯೂ.ಉಪೇಂದ್ರ ವೀರೇಶ ಐಹೊಳೆ, ಕಾಮಿಡಿ ಆಕ್ಟರ್ ದಾನಪ್ಪ , ಮುತ್ತುರಾಜ್ ಬುದ್ನಿ , ಭಾವನಾ ಸಿಂಧೆ, ಕಿಟ್ಟಿ ತ ತಾಳಿಕೋಟೆ ಜೊತೆಗೆ ಉತ್ತರ ಕರ್ನಾಟಕದ ಅನೇಕ ಕಲಾವಿದರು



ಅಬಿನಯಿಸುತ್ತಿದ್ದಾರೆ. ತಾಂತ್ರಿಕ ವರ್ಗದಲ್ಲಿ- ಛಾಯಾಗ್ರಹಣ ಸುವಿಶ್, ಜನಾರ್ಧನ್ , ಸಂಗೀತ ರಿದಂ ಕುಟ್ಟಿ, ಸಾಹಿತ್ಯ ಶಿವರಾಜ್ ಆರ್, ಕಿನ್ನಾಳ ರಾಜ್ ,ಲೋಕೇಶ್ ವಿದ್ಯಾಧರ, ಸಂಭಾಷಣೆ ಶಿವಂ ಬಂಗಾರಿ ಸಹಾಯಕ ನಿರ್ದೇಶನ ಸಂತೋಷ್ ,ಶಿವಂ ಬಂಗಾರಿ , ಸಂಕಲನ ಮುತ್ತುರಾಜ್ , ಸಾಹಸ ಸಿದ್ದಾರೂಢ ಹೂಗಾರ , ನೃತ್ಯ ಅಲಿ, ಸಹಕಾರ ಮಹಾಲಕ್ಷ್ಮಿ , ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ.ವೀರೇಶ್ ಹಂಡಿಗಿ ಇವರಿದ್ದು, ಕಥೆ-ಚಿತ್ರಕಥೆ-ನಿರ್ದೇಶನ ಹಾಗೂ ನಿರ್ಮಾಪಕರು ಲೋಕೇಶ್ ವಿದ್ಯಾಧರ್ ಆಗಿದ್ದಾರೆ.

** 

-ಡಾ.ಪ್ರಭು ಗಂಜಿಹಾಳ
ಮೊ-9448775346

# ರಸಗೊಬ್ಬರ, ಬೀಜ ಕೊರತೆ ಆಗದಂತೆ ನಿಗಾವಹಿಸಲು ಸೂಚನೆ



**ಬೆಳಗಾವಿ ವಾರ್ತೆ ಬೆಳಗಾವಿ:** ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಆಗದಂತೆ ನಿಗಾವಹಿಸುವುದರ ಜೊತೆಗೆ ಸಾಧ್ಯವಾದಷ್ಟು ರಸಗೊಬ್ಬರಗಳ ಬಳಕೆ ಕಡಿಮೆ ಮಾಡುವಂತೆ ರೈತರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಸಮರ್ಪಕ ಪೂರೈಕೆ ಹಾಗೂ ಭೂ ತಾಯಿ ರಕ್ಷಣೆ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಬಾರಿ ಜಿಲ್ಲೆಯಲ್ಲಿ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ತೊಂದರೆ ಆಗಿರುವುದಿಲ್ಲ ಈ ಬಾರಿಯು ಸಹ ಅದೇ ರೀತಿ ಪೂರೈಕೆಗೆ ಕ್ರಮ ವಹಿಸಬೇಕು. ಕಳೆದ ಬಾರಿ ಜಿಲ್ಲೆಯಲ್ಲಿ ರಸಗೊಬ್ಬರ ಬಳಕೆಯಲ್ಲಿ ಕಡಿಮೆ ಆಗಿದ್ದು, ಈ ಬಾರಿಯು ಅಧಿಕಾರಿಗಳು, ರಸಗೊಬ್ಬರ ಪೂರೈಕೆದಾರರು ಸಮನ್ವಯ ಸಾಧಿಸಿ ರೈತರಲ್ಲಿ ರಸಗೊಬ್ಬರ ಬಳಕೆಯನ್ನು ಕಡಿಮೆ ಮಾಡಲು ಜಾಗೃತಿ ಮೂಡಿಸಬೇಕು ಎಂದರು.

ರಸಗೊಬ್ಬರ ಮಾರಾಟದಲ್ಲಿ ಕೃತಕ ಅಭಾವ, ಕಾಳಸಂತೆಯಲ್ಲಿ ಮಾರಾಟ ಮಾಡಬಾರದು. ಕಳೆದ ಬಾರಿ ಕೆಲ ಸ್ಥಳಗಳಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಿದರ ಕುರಿತು ದೂರುಗಳು ಬಂದಿದ್ದು ಈ ಬಾರಿ ಆ ರೀತಿ ಆಗದಂತೆ ನಿಗಾವಹಿಸಲು ತಿಳಿಸಿದರು.

ರಸಗೊಬ್ಬರ ದಾಸ್ತಾನು ಕುರಿತು ರೈತರಿಗೆ ಸರಿಯಾದ ಮಾಹಿತಿ ಒದಗಿಸಬೇಕು. ರೈತರಲ್ಲಿ ವಿನಾಕಾರಣ ಆತಂಕ ಮೂಡಿಸದೆ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಆಗದಂತೆ ನೋಡೊಕೊಳ್ಳಲು ಸೂಚಿಸಿದರು.

ಇಲಾಖೆ ವತಿಯಿಂದ ರೈತರಿಗೆ ಎಲ್ಲ ರೀತಿಯ ಮಾಹಿತಿ ವಿನಿಮಯ ಮಾಡಬೇಕು. ರೈತ ಸಂಘಟನೆಗಳೊಂದಿಗೆ ನಿಯಮಿತವಾಗಿ ಸಭೆ ಜರುಗಿಸಿ ಪರಿಸ್ಥಿತಿಯ ವಿವರಗಳನ್ನು ಒದಗಿಸಲು ತಿಳಿಸಿದರು.

ಜಿಲ್ಲೆಗೆ ಬೇಕಾದಂತಹ ರಸಗೊಬ್ಬರ ತರಲು ಇಲಾಖೆಯು ಜೊತೆಗೆ ಪೂರೈಕೆದಾರರು ಪ್ರಯತ್ನಿಸಬೇಕು. ಜಿಲ್ಲೆಯ ಎಲಲ ರಸಗೊಬ್ಬರ ಅಂಗಡಿಗಳ ದಾಸ್ತಾನಿನ ವಿವರ ಲಭ್ಯವಿದ್ದು, ರಸಗೊಬ್ಬರ ಪೂರೈಕೆಗೆ ಸಂಬಂಧಿಸಿದಂತೆ ಪೂರೈಕೆದಾ ರರು ಆವಕ ಜಾವಕ ಮಾಹಿತಿಯನ್ನು ಪ್ರತಿದಿನ ಕಡ್ಡಾಯವಾಗಿ ನಮೂದಿಸಬೇಕು.

ಅತಿಯಾದ ರಸಗೊಬ್ಬರ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ರೈತರಿಗೆ ತಿಳಿ ಹೇಳುವ ಮೂಲಕ ಮಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಮನವರಿಕೆ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಅವರು ಮಾತನಾಡಿ, ರೈತರು ಜಮೀನಿನಲ್ಲಿ ಯಾವ ಬೆಳೆ ಬೆಳೆಯಬೇಕು ಎನ್ನುವುದನ್ನು ರಸಗೊಬ್ಬರ ಅಂಗಡಿಗಳಿಗೆ ಭೇಟಿ ನೀಡುವಂತಹ ಸಂದರ್ಭದಲ್ಲಿ ಪೂರೈಕೆದಾರರು ರೈತರಿಗೆ ಉತ್ತಮ ಮಾರ್ಗದರ್ಶನ ನೀಡಬೇಕು. ಜಿಲ್ಲೆಯಲ್ಲಿ ರಸಗೊಬ್ಬರದ ಕೊರತೆ ಇರುವುದಿಲ್ಲ. ರಸಗೊಬ್ಬರ, ಬಿತ್ತನೆ ಬೀಜಗಳ ಕೃತಕ ಅಭಾವ ಅಥವಾ ಹೆಚ್ಚಿನ ದರಕ್ಕೆ ಮಾರಾಟ ಮಾಡಬಾರದು ಎಂದು ಹೇಳಿದರು.

ಸಾವಯವ ಕೃಷಿಗೆ ಒತ್ತು ನೀಡಲು ಇದು ಉತ್ತಮ ಸಮಯವಾಗಿದ್ದು ಕೃಷಿ ಇಲಾಖೆ ಹಾಗೂ ರಸಗೊಬ್ಬರ, ಬಿತ್ತನೆ ಬೀಜ ಪೂರೈಕೆದಾರರು ರೈತರಲ್ಲಿ ಅರಿವು ಮೂಡಿಸಬೇಕು.

ರಸಗೊಬ್ಬರ ಮಾರಾಟಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಬೇಕು. ರಸಗೊಬ್ಬರ ಮಾರಾಟಕ್ಕೆ ಸಂಬಂಧಿಸಿದಂತೆ ತೆರಿಗೆ ಇಲಾಖೆ, ವೀಚಕ್ಷಣಾ ತಂಡಗಳು ನಿರಂತರವಾಗಿ ನಿಗಾ ವಹಿಸುತ್ತಿದ್ದು ದಾಸ್ತಾನು ಹಾಗೂ ಮಾರಾಟದಲ್ಲಿ ಯಾವುದೆ ರೀತಿಯ ಸಮಸ್ಯೆಗಳಾಗದಂತೆ ನಿಗಾವಹಿಸಲು ಜಿಲ್ಲಾಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ? ಶಿಂಧೆ ಅವರು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕರಾದ ಎಚ್.ಡಿ.ಕೋಳೆಕರ ಅವರು ಮಾತನಾಡಿ, ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಗೆ ಬೇಕಾದಂತಹ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಸಮರ್ಪಕ ದಾಸ್ತಾನು ಹೊಂದಿದ್ದು ರಸಗೊಬ್ಬರ ಪೂರೈಕೆಮಾಡುವ ಸಂಸ್ಥೆಗಳ ಪ್ರತಿನಿಧಿ ಹಾಗೂ ಸಾಗಾಣಿಕೆ ಸಂಸ್ಥೆಯವರೊಂದಿಗೆ ಸಭೆ ಜರುಗಿಸಲಾಗಿರುತ್ತದೆ ಎಂದರು.

ಜಿಲ್ಲಾ ಮಟ್ಟದಲ್ಲಿ 10 ಜನ ಹಿರಿಯ ಅಧಿಕಾರಿಗಳನ್ನೊಳಗೊಂಡ ರಸಗೊಬ್ಬರ ಮೇಲ್ವಿಚಾರಣೆ ಕೋಶವನ್ನು ರಚಿಸಿ ಮೇಲ್ವಿಚಾರಣೆ ಮಾಡಲು ಕ್ರಮವಹಿಸಲಾಗಿದ್ದು ಕೃಷಿಯೇತರ ಚಟುವಟಿಕೆಗಳಿಗೆ ಯೂರಿಯಾ ರಸಗೊಬ್ಬರ ಬಳಕೆಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಮಹಾಂತೇಶ ಮುರಗೋಡ, ಕೃಷಿ ಅಧಿಕಾರಿಗಳು, ಕೃಷಿ ವಿಜ್ಞಾನ ಕೇಂದ್ರಗಳ ಮುಖ್ಯಸ್ಥರು, ರಸಗೊಬ್ಬರ, ಬಿತ್ತನೆ ಬೀಜ ಪೂರೈಕೆದಾರರು ಉಪಸ್ಥಿತರಿದ್ದರು.

# ಆತ್ಮನಿರ್ಭರ ಯೋಜನೆ ರೈತರ ಸಶಕ್ತಿಕರಣಕ್ಕೆ ಅನುಕೂಲ; ಧಾರವಾಡ ಜಿಲ್ಲೆಯಲ್ಲಿ 540 ಘಟಕಗಳಿಗೆ ಸಾಲ ಮಂಜೂರಾಗಿದ್ದು, 100 ಅರ್ಜಿಗಳು ವಿಲೇವಾರಿಗೆ ಸಿದ್ದವಾಗಿವೆ



**ಬೆಳಗಾವಿ ವಾರ್ತೆ ಧಾರವಾಡ:** ಆತ್ಮನಿರ್ಭರ ಭಾರತ ಕಾರ್ಯಕ್ರಮದಡಿಯಲ್ಲಿ ಜಾರಿಯಾಗುತ್ತಿರುವ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಘಟಕಗಳ ಯೋಜನೆಗೆ ಸಂಬಂಧಿಸಿದಂತೆ ಇಂದು (ಏ.15) ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಮಿತಿ ಸಭೆಯು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರ ಅಧ್ಯಕ್ಷತೆಯಲ್ಲಿ ಜರುಗಿತ್ತು.

ಅವರು, ಆತ್ಮನಿರ್ಭರ ಭಾರತ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆದ್ಯತೆ ನೀಡಿ, ಮಾತನಾಡಿದರು.

2020-21 ರಿಂದ ಜಾರಿಯಲ್ಲಿರುವ ಪ್ರಸ್ತುತ ಕಾರ್ಯಕ್ರಮವು ಸ್ವಯಂ ಉದ್ಯೋಗ ಮಾಡುವ ಫಲಾನುಭವಿಗಳಿಗೆ ಅತ್ಯಂತ ಉಪಯುಕ್ತವಾಗಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳಲು ಅರ್ಹ ಸಾರ್ವಜನಿಕರು ಮುಂದೆ ಬರಬೇಕೆಂದು ಅವರು ತಿಳಿಸಿದರು.

ಆತ್ಮನಿರ್ಭರ ಯೋಜನೆಯು ಗರಿಷ್ಠ 15 ಲಕ್ಷ ರೂಪಾಯಿಗೆ ಮಿತಿಗೊಳಪಟ್ಟು ಶೇ. 50 ರ ಸಹಾಯ ಧನದೊಂದಿಗೆ ಸಾಲ ನೀಡುವ ಕಾರ್ಯಕ್ರಮವಾಗಿದ್ದು, ಯಾವುದೇ ಸಿದ್ಧ ಆಹಾರ ಅಥವಾ ಮೌಲ್ಯವರ್ಧಿತ ಉತ್ಪನ್ನಗಳ ಘಟಕಗಳನ್ನು ಸ್ಥಾಪಿಸಲು ಅವಕಾಶ ಇರುತ್ತದೆ ಎಂದು ಹೇಳಿದರು.

ವೈಯಕ್ತಿಕ ಉದ್ದಿಮೆಗಳು, ಗುಂಪು ಚಟುಗಟಿಕೆಗಳು, ಪ್ರಾಥಮಿಕ ಬಂಡವಾಳ(ಬೀಜಧನ), ಸಾಮಾನ್ಯ ಮೂಲಭೂತ ಸೌಕರ್ಯ, ಬ್ರಾಂಡಿಂಗ್ ಮತ್ತು ಮಾರುಕಟ್ಟೆ ಸಂಪರ್ಕ ಕೆಲಸಕಾರ್ಯಗಳಿಗೆ ಸಾಲ ಕೊಡುವ ಯೋಜನೆ ಇದ್ದು, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಫಲಾನುಭವಿಗಳಿಗೆ ತಮ್ಮ ಹಂತದಲ್ಲಿಯೇ ಸಹಾಯ ಮಾಡಲು ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳನ್ನು (ಡಿ.ಆರ್.ಪಿ.) ನೇಮಿಸಲಾಗಿದೆ. ರಾಜ್ಯ ಮಟ್ಟದಲ್ಲಿ ಸಮನ್ವಯ ಸಂಸ್ಥೆಯಾಗಿ ಕಪೆಕ್ ಕಾರ್ಯ ನಿರ್ವಹಿಸುತ್ತಿದ್ದು, ಜಿಲ್ಲಾ ಮಟ್ಟದಲ್ಲಿ ಕೃಷಿ ಇಲಾಖೆ ಅರಿವು ಮೂಡಿಸುವ ಕೆಲಸವನ್ನು ಮಾಡುತ್ತಿದೆ. ಫಲಾನುಭವಿಗಳು ತಮ್ಮ ವಹಿವಾಟಿನ ಬ್ಯಾಂಕುಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗೆ ಬ್ಯಾಂಕ್ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಹೇಳಿದರು.

ಧಾರವಾಡ ಜಿಲ್ಲೆಯಲ್ಲಿ 540 ಘಟಕಗಳಿಗೆ ಸಾಲ ಮಂಜೂರಾಗಿದ್ದು, ಬಹಳಷ್ಟು ಕುಟುಂಬಗಳ ಜೀವನ ನಿರ್ವಹಣೆಗೆ ಆದಾಯ ದೊರೆತಂತಾಗಿದೆ. ಅಲ್ಲದೆ ಪ್ರತಿ ಘಟಕದಲ್ಲೂ ಹಲವಾರು ಜನರಿಗೆ ದೈನಂದಿನ ಕೆಲಸ ಸಿಗುವ ಮೂಲಕ ಕಾರ್ಮಿಕರಿಗೂ ಜೀವನಾಂಶ ಗಳಿಸಿಕೊಳ್ಳಲು ಅನುಕೂಲವಾಗಿದೆ.

100 ಕ್ಕೂ ಹೆಚ್ಚು ಪ್ರಸ್ತಾವನೆಗಳು ವಿವಿಧ ಬ್ಯಾಂಕುಗಳಲ್ಲಿ ಪರಿಶೀಲನೆಯಲ್ಲಿದ್ದು, ಇಷ್ಟರಲ್ಲೇ ಸಾಲ ಮಂಜೂರಾಗುತ್ತದೆ. ಇತರೆ ಯೋಜನೆಗೆ ಹೋಲಿಸಿದಲ್ಲಿ ಪ್ರಸ್ತುತ ಕಾರ್ಯಕ್ರಮದಲ್ಲಿ ಸಾಲ ನೀಡುವ ಪ್ರಕ್ರಿಯೆಯನ್ನು ಬಹಳಷ್ಟು ಸರಳೀಕೃತಗೊಳಿಸಿದೆ. ಇದಕ್ಕೆ ಸಂಬಂಧಿಸಿ ಜಿಲ್ಲಾ ಮಟ್ಟದ ಸಮಿತಿ (ಡಿ.ಎಲ್.ಸಿ.) ಉಸ್ತುವಾರಿ ವಹಿಸಿಕೊಂಡಿದ್ದು ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದರು.

ಫಲಾನುಭವಿಗಳ ಹಿತದೃಷ್ಟಿಯಿಂದ ಮತ್ತು ಸ್ವಯಂ ಉದ್ಯೋಗವನ್ನು ಪ್ರೋತ್ಸಾಹಿಸುವ ಆಶಯದಿಂದ ಪ್ರಸ್ತುತ ಸಾಲ ಸಂಪರ್ಕಿತ ಯೋಜನೆಯನ್ನು 2026ನೇ ಸಾಲಿನ ಸಪ್ಟೆಂಬರ್ ಅಂತ್ಯದವರೆಗೆ ವಿಸ್ತರಿಸಲಾಗಿದೆ. ಆದ್ದರಿಂದ ನಿರುದ್ಯೋಗಿ ಯುವಕ-ಯುವತಿಯರು ವೈವಿಧ್ಯಮಯ ಮತ್ತು ಹೊಸಮಾದರಿಯ ಆಹಾರ ಘಟಕಗಳನ್ನು ಸ್ಥಾಪಿಸಲು ಮುಂದೆ ಬರಬೇಕೆಂದು ಹೇಳಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಬಸವರಾಜ ಗಡಾದ, ನಬಾರ್ಡ ವ್ಯವಸ್ಥಾಪಕ ಮಯೂರ ಕಾಂಬಳೆ, ಡಿ.ಐ.ಸಿ. ಅಧಿಕಾರಿ ಶಿವಾನಂದ ಕಮ್ಮಾರ, ತೋಟಗಾರಿಕಾ ಜಂಟಿ ನಿರ್ದೇಶಕ ಕಾಶಿನಾಥ ಭದ್ರಣ್ಣವರ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಬಿ.ಎಸ್. ರಾಠೋಡ, ಸಹಾಯಕ ಕೃಷಿ ನಿರ್ದೇಶಕ ಚನ್ನಪ್ಪ ಅಂಗಡಿ, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು ಮತ್ತು ಇತರೆ ಸಿಬ್ಬಂದಿಗಳು ಹಾಜರಿದ್ದರು.

# ಸಮುದಾಯದ ಅಭಿವೃದ್ಧಿಗೆ ಮಠಗಳು ನಿತ್ಯ ಶ್ರಮಿಸಲಿ: ನೀಲಕಂಠ ಶ್ರೀ



**ಬೆಳಗಾವಿ ವಾರ್ತೆ ಬೈಲಹೊಂಗಲ:** ಸಮಾಜದ ಅಭಿವೃದ್ಧಿಯ ಚಿಂತನೆ ಇಟ್ಟುಕೊಂಡು ಲೋಕ ಕಲ್ಯಾಣ ಮಾಡುವದರ ಜೊತೆಗೆ ಅಧ್ಯಾತ್ಮಿಕ ಚಿಂತನೆಗಳನ್ನು ಬಿತ್ತಿ ಸಂಸ್ಕಾರ-ಸಂಸ್ಕೃತಿ ಪೋಷಣೆಗೆ ಮಠಗಳು ಸದಾ ಕ್ರೀಯಾಶೀಲವಾಗಿರಬೇಕೆಂದು ಶಾಖಾ ಮೂರುಸಾವಿರ ಮಠದ ಪ್ರಭು ನೀಲಕಂಠ ಸ್ವಾಮೀಜಿ ಹೇಳಿದರು.

ಅವರು ನಗರದ ಹೊಸೂರ ರಸ್ತೆಯಲ್ಲಿನ ಭಗಳಾಂಬಾದೇವಿ ಮಂದಿರದಲ್ಲಿ ಸೋಮವಾರ ನಡೆದ 2026 ನೇ ಸಾಲಿನ ಶ್ರೀ ಭಗಳಾಂಭಾದೇವಿ ಜಾತ್ರಾ ಮಹೋತ್ಸವ ಹಾಗೂ ಶ್ರೀ ಭಗಳಂಭಾದೇವಿ ಮಂಗಲ ಕಾರ್ಯಾಲಯ ಲೋಕಾರ್ಪಣೆಗೊಳಿಸಿ ಮಾತನಾಡಿ, ಜನರನ್ನು ಉದ್ಧರಿಸುಲ್ಲಿ ಮಠ-ಮಂದಿರಗಳ ಪಾತ್ರ ಅತ್ಯಂತ ಜವಾಬ್ದಾರಿಯಾಗಿದ್ದು ಈ ನಿಟ್ಟಿನಲ್ಲಿ ಡಾ.ವೀರಯ್ಯ ಸ್ವಾಮಿ ಹಿರೇಮಠ ಅವರು ದೇವಾಲಯ ಮೂಲಕ ಹಲವಾರು ವಿಧಾಯಕ ಕಾರ್ಯಗಳನ್ನು ಕೈಗೊಂಡಿದ್ದು ಮಠಗಳ ಗರಿಮೆ ಹೆಚ್ಚಿಸಿದೆ ಎಂದರು.

ಮುನವಳಿಯ ಸೋಮಶೇಖರ ಮಠದ ಮುರುಘಂದ್ರ ಸ್ವಾಮೀಜಿ ಮಾತನಾಡಿ, ಮನುಷ್ಯ ಮತ್ತೊಬ್ಬರಿಗೆ ಬದುಕಿಗೆ ಸಹಕಾರಿಯಾಗುವಂತಹ ಅಪರಿಮಿತ ಕಾರ್ಯ ಸಾಧನೆ ಮಾಡಿದಾಗ ಮಾತ್ರ ಅವನ ಜೀವನ ಸಾರ್ಥಕತೆ ಪಡೆಯಲು ಸಾಧ್ಯವಾಗಲಿದೆ. ಸಮಾಜದ ಒಳಿತಿಗಾಗಿ ಅನುಷ್ಠಾನಗೊಂಡ ಮಂಟಪಗಳನ್ನು ಭಕ್ತರು ಜಾಗರೂಕತೆಯಿಂದ ಸಾಗಬೇಕೆಂದರು. ಕಾಪಾಡಿಕೊಂಡು

ಶ್ರೀ ಭಗಳಾಂಭಾದೇವಿ ದೇವಸ್ಥಾನದ ಧರ್ಮಾಧಿಕಾರಿ ಡಾ.ವೀರಯ್ಯ ಸ್ವಾಮೀ ಹಿರೇಮಠ ಸಭೆಯ ಅಧ್ಯಕ್ಷತೆ ವಹಿಸಿ ಮಠದ ಪರಂಪರೆಯ ಬಗ್ಗೆ ಪ್ರಸ್ತಾವಿಕ ಮಾತನಾಡಿದರು. ಧಾರ್ಮಿಕ ದತ್ತಿ

ಇಲಾಖೆಯ ರಾಜ್ಯ ನಿರ್ದೇಶಕ ಡಾ.ಮಹಾಂತೇಶ ಶಾಸ್ತ್ರೀ ಆರಾದ್ರಿಮಠ, ಚಿಪ್ಪಲಕಟ್ಟಿಯ ಕಲ್ಲೇಶ್ವರ , ಶಿಂಗನಹಳ್ಳಿಯ ರಾಚೋಟೇಶ್ವರ ಶಿವಾಚಾರ್ಯರು, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಪ್ರಭಾ ಅಕ್ಕ, ಮಾಸ್ತಮರಡಿಯ ಅಂಬಾದೇವಿ ಮಠದ ಪ್ರಭು ಶ್ರೀ, ಬೈಲವಾಡದ ಕುಮಾರ ದೇವರು, ಚಂದ್ರಪ್ರಭಾವತಿ ಹಿರೇಮಠ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ನಾನಾಸಾಹೇಬ ಪಾಟೀಲ, ನಿವೃತ ಶಿಕ್ಷಕ ಶಿವಪ್ರಸಾದ ಹುಲೆಪ್ಪನವರಮಠ, ಗಾಣಿಗ ಸಮಾಜದ ತಾಲೂಕಾಧ್ಯಕ್ಷ ಜಿ.ಬಿ.ಗಿರಿಜನ್ನವರ, ಈರಣ್ಣ ಬೆಳವಡಿ, ಮಹಾಂತೇಶ ಅಕ್ಕಿ, ಮಹಾಂತೇಶ ಹತಕುಣಿ, ದುಂಡಪ್ಪ ಹಣಸಿ, ಗುರುನಾಥ ಇಟಗೌಡರ, ಕಾಂತು ಹೊಳಿ, ಸಂತೋಷ ವಿರಕ್ತ ಮಠ, ಶಿವಾನಂದ ಬಡ್ಡಿಮನಿ, ರೇಖಾ ವಿರಕ್ತಮಠ ಮುಂತಾದವರು ವೇದಿಕೆ ಮೇಲಿದ್ದರು.

ಇದಕ್ಕೂ ಮೊದಲು ಮುಂಜಾನೆ ಶ್ರೀ ಭಗಳಾಂಭಾ ದೇವಿಗೆ ವಿಶೇಷ ಪೂಜೆ, ಪ್ರಾರ್ಥನೆ, ಕುಂಕುಮಾರ್ಚನೆ, ಉಡಿ ತುಂಬುವ ಕಾರ್ಯ, ಪಾಲಕಿ ಉತ್ಸವ, ಮುತ್ತೈದೆಯರಿಂದ ಕುಂಭಮೇಳ, ಶ್ರೀಗಳ ಸಾರೋಟ ಮೆರವಣಿಗೆ, ಭಜನೆ, ಹೋಮ, ಹವನ ಜರುಗಿದವು. ಇದೇ ಸಂದರ್ಭದಲ್ಲಿ ಸುಮಾರು 20 ಕ್ಕೂ ಹೆಚ್ಚಿನ ಸಾಧಕರಿಗೆ 2026 ನೇ ಸಾಲಿನ ಮಾತಾಶ್ರೀ ಭಗಳಾಂಬಾದೇವಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅನ್ನ ಪ್ರಸಾದ ಏರ್ಪಡಿಸಲಾಗಿತ್ತು. ನೂರಾರು ಭಕ್ತರು ಪಾಲ್ಗೊಂಡಿದ್ದರು.

ಪ್ರಾಂಶುಪಾಲ ಆರ್.ಎಫ್.ಇಂಚಲ ಸ್ವಾಗತಿಸಿದರು. ನಿವೃತ ಶಿಕ್ಷಕ ಶಿವಪ್ರಸಾದ ಹುಲೆಪ್ಪನವರಮಠ, ಶಿವಾನಂದ ಮಠಪತಿ ನಿರೂಪಿಸಿದರು. ಮಹಾಂತೇಶ ಹಿರೇಮಠ ವಂದಿಸಿದರು.

# ವಿಶ್ವ ಆರೋಗ್ಯ ದಿನಾಚರಣೆ; ಆರೋಗ್ಯ ಶಿಕ್ಷಣ ಶಿಬಿರ



**ಬೆಳಗಾವಿ ವಾರ್ತೆ ಗೋಕಾಕ:** ವಿಶ್ವ ಆರೋಗ್ಯ ದಿನಾಚರಣೆಯ ಅಂಗವಾಗಿ ಭಾರತೀಯ ವೈದ್ಯಕೀಯ ಸಂಘ ಗೋಕಾಕ್ ಶಾಖೆ ಹಾಗೂ ಕರ್ನಾಟಕ ರಾಜ್ಯ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರ ಸಂಘ, ಸಾರ್ವಜನಿಕ ಜಾಗೃತಿ ಸಮಿತಿ, ಸಹಯೋಗದಲ್ಲಿ ಇತ್ತೀಚೆಗೆ ಗೋಕಾಕ್‌ನ ಮಯೂರ ಶಾಲೆಯಲ್ಲಿ ಶಿಕ್ಷಕರಿಗಾಗಿ ಆರೋಗ್ಯ ಶಿಕ್ಷಣ ಶಿಬಿರವನ್ನು ಆಯೋಜಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಖ್ಯಾತ ಸ್ತ್ರೀರೋಗ ಮತ್ತು ಇನ್ಫರ್ಟಿಲಿಟಿ ತಜ್ಞರಾದ ಡಾ. ಜ್ಯೋತಿ ವಿ. ಶಿಂಧೋಳಿಮಠ ಅವರು ಉಪನ್ಯಾಸ ನೀಡಿ ಜೀವನಶೈಲಿ ಸಂಬಂಧಿತ ರೋಗಗಳಾದ ಮಧುಮೇಹ, ರಕ್ತದೊತ್ತಡ, ಬೊಜ್ಜು ಸೇರಿದಂತೆ ಕ್ಯಾನ್ಸರ್ ರೋಗಗಳನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವ ಮಹತ್ವವನ್ನು ವಿವರಿಸಿದರು. ನಿಯಮಿತವಾಗಿ ಆರೋಗ್ಯ ತಪಾಸಣೆಗಳನ್ನು ಮಾಡಿಸಿಕೊಳ್ಳುವುದು ಹಾಗೂ ತಡೆಗಟ್ಟುವ ಲಸಿಕೆಗಳನ್ನು ಕಡ್ಡಾಯವಾಗಿ ಪಡೆದುಕೊಳ್ಳುವುದು ಅತ್ಯಂತ ಅಗತ್ಯವೆಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಎಲ್ಲಾ ಶಿಕ್ಷಕರು ಸಂವಾದದಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಮೆಚ್ಚಿಕೊಂಡರು. ಇಂತಹ ಆರೋಗ್ಯ ಜಾಗೃತಿ ಕಾರ್ಯಕ್ರಮಗಳು ಎಲ್ಲಾ ಶಾಲೆಗಳಲ್ಲಿ ನಿರಂತರವಾಗಿ ನಡೆಯಬೇಕು ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಈ ಶಿಬಿರವು ಶಿಕ್ಷಕರಲ್ಲಿ ಆರೋಗ್ಯದ ಬಗ್ಗೆ ಅರಿವು ಮೂಡಿಸಲು ಬಹಳ ಸಹಕಾರಿಯಾಯಿತು.

# ಅಂತರರಾಜ್ಯ ಬೈಕ್ ಕಳ್ಳನ ಬಂಧನ; 3.84 ಲಕ್ಷ ರೂ ಮೌಲ್ಯದ 7 ಬೈಕ್‌ಗಳ ಜಪ್ತಿ

**ಬೆಳಗಾವಿ ವಾರ್ತೆ ಗೋಕಾಕ:** ಅಂತರರಾಜ್ಯ ಬೈಕ್ ಕಳ್ಳನನ್ನು ಬಂಧಿಸಿರುವ ಗೋಕಾಕ ಶಹರ ಪೊಲೀಸರು, 3.84 ಲಕ್ಷ ರೂ ಮೌಲ್ಯದ 7 ಬೈಕ್‌ಗಳನ್ನು ಜಪ್ತಿ ಮಾಡಿದ್ದಾರೆ.



ಗೋಕಾಕ : ಕಳ್ಳತನವಾಗಿದ್ದ ಬೈಕಗಳೊಂದಿಗೆ ಪೊಲೀಸ್ ಅಧಿಕಾರಿಗಳು



ಗೋಕಾಕ: ಬೈಕ್ ಕಳ್ಳತನ ಮಾಡಿದ ಆರೋಪಿ.

ಕೋಲ್ಹಾಪೂರ ಜಿಲ್ಲೆಯ ಗಡಹಿಂಗ್ಲಜ. ಹಾಲಿವಾಸ ರಾಮದುರ್ಗ ತಾಲೂಕಿನ ಕಡಕೋಳ ಗ್ರಾಮದ ರಮೇಶ ಮನೋಹರ ಸುತಾರ (36) ಬಂಧಿತ ಕಳ್ಳ. ಮಾ 30 ರಂದು ನಗರದ ಬಸ್ ನಿಲ್ದಾಣದಲ್ಲಿ ಬೈಕ್ ಕಳುವಾಗಿತ್ತು. ಈ ಕುರಿತು ಗೋಕಾಕ ನಗರದ ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಆರೋಪಿಯ ಪತ್ತೆಗೆ ವಿಶೇಷ ತಂಡ ರಚಿಸಲಾಗಿತ್ತು. ಇದರ ಬೆನ್ನು ಬಿದ್ದ ಪೊಲೀಸ್ ಅಧಿಕಾರಿಗಳು ರಮೇಶ ಮನೋಹರ ಸುತಾರನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಕಳವು ಪ್ರಕರಣಗಳು ಹೊರ ಬಂದಿದೆ. ಗೋಕಾಕ ಶಹರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2, ಬೆಳಗಾವಿ ಸಾಂಬ್ರಾ, ಸಂಕೇಶ್ವರ, ಗಡಹಿಂಗ್ಲಜ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳುವು ಮಾಡಿದ್ದ 5 ಒಟ್ಟು 7 ಬೈಕ್ ಗಳನ್ನು ಜಪ್ತಿ ಮಾಡಲಾಗಿದೆ.

ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ ಕೆ, ಹೆಚ್ಚುವರಿ ಎಸ್.ಪಿ ರಾಮಗೊಂಡ ಬಸರಗಿ, ಡಿವೈಎಸ್‌ಪಿ ರವಿ ನಾಯಿಕ, ಗೋಕಾಕ ವೃತ್ತ ಇನ್‌ಸ್ಪೆಕ್ಟರ್ ಸುರೇಶಬಾಬು ಇವರ ಮಾರ್ಗದರ್ಶನದಲ್ಲಿ ಪಿಎಸ್‌ಐ ಕಿರಣ ಮೋಹಿತೆ, ಪ್ರೋ. ಪಿ.ಎಸ್.ಐ ಗೌರಿಶಂಕರ, ಸಿಬ್ಬಂದಿ ಆರ್.ಬಿ.ಹಡಪದ, ಕೆ.ಎನ್. ಇಳಿಗೇರ,ಬಿ.ಎಸ್. ಸಿದ್ನಾಳ,ಎಂ. ಆರ್. ಅಂಬಿ, ಪಿ.ಎಮ್ ಘಸ್ತಿ, ಜೆ.ಎಚ್. ಗುಡ್ಲಿ, ಎಸ್ .ಎಲ್.ಮಂಗಿ, ಮಂಜು ಹುಚ್ಚಗೌಡರ, ಐ.ವಿ.ಘಂಟಿ, ಮಂಜುನಾಥ್ ನಾಯಿಕ, ಬೆಳಗಾವಿಯ ಟೆಕ್ನಿಕಲ್ ಸೆಲ್‌ನ ಸಚೀನ ಪಾಟೀಲ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿತ್ತು. ಸದರಿ ತಂಡದ ಕಾರ್ಯಾಚರಣೆಯನ್ನು ಪೊಲೀಸ್ ವರಿಷ್ಠಾಧಿಕಾರಿ ರವರು ಶ್ಲಾಘಿಸಿದ್ದು, ಆರೋಪಿಯನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದ್ದು, ತನಿಖೆ ಮುಂದುವರೆದಿದೆ.



**ಬೆಳಗಾವಿ ವಾರ್ತೆ ಗೋಕಾಕ:** ಪ್ರಧಾನಿ ನರೇಂದ್ರ ಮೋದಿಯವರು ಮಹಿಳಾ ಮೀಸಲಾತಿ ವಿಧೇಯಕವನ್ನು ಜಾರಿಗೊಳಿಸುತ್ತಿರುವ ಹಿನ್ನಲೆ ಬಿಜೆಪಿ ನಗರ ಹಾಗೂ ಗ್ರಾಮೀಣ ಮಹಿಳಾ ಮೋರ್ಚಾ ಪದಾಧಿಕಾರಿಗಳು ಮಹಿಳಾ ಪಥಸಂಚಲನ ಕಾರ್ಯಕ್ರಮ ಆಯೋಜಿಸಿದ್ದರು. ಈ ಸಂದರ್ಭದಲ್ಲಿ ಮಹಿಳಾ ಮೋರ್ಚಾದ ರಾಜೇಶ್ವರಿ ಒಡೆಯರ ಸೇರಿದಂತೆ ಅನೇಕರು ಇದ್ದರು.

# ಇಂದಿನ ಮಕ್ಕಳಿಗೆ ಪ್ರಾಣಿ-ಪಕ್ಷಿ ಸಂಕುಲನಗಳ ಸಂರಕ್ಷಣೆ ತಿಳುವಳಿಕೆ ಅಗತ್ಯ



**ಬೆಳಗಾವಿ ವಾರ್ತೆ ಧಾರವಾಡ:** ಆಧುನಿಕ ತಂತ್ರಜ್ಞಾನಗಳ ಪ್ರಭಾವದಿಂದಾಗಿ ಕಾಡುಗಳು ನಶಿಸಿ ಹೋಗುತ್ತಿರುವ ಇಂದಿನ ಯುಗದಲ್ಲಿ ಪ್ರಾಣಿ, ಪಕ್ಷಿಗಳನ್ನು ಸಂರಕ್ಷಿಸದೇ ಹೋದಲ್ಲಿ ಮುಂದಿನ ದಿನಗಳಲ್ಲಿ ಝು ಹಾಗೂ ಟಿವಿಗಳಲ್ಲಿ ಮಾತ್ರ ಅವುಗಳನ್ನು ನೋಡುವ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂದು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಾದ ವಸಂತರೆಡ್ಡಿ ಕೆ.ವಿ ಅವರು ಹೇಳಿದರು.

ಇಂದು ಸಾಮಾಜಿಕ ಅರಣ್ಯ ಇಲಾಖೆ ಹಾಗೂ ರಂಗಾಯಣ ಧಾರವಾಡ ಸಹಯೋಗದಲ್ಲಿ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಛಯ ಸಭಾಭವನದಲ್ಲಿ ಆಯೋಜಿಸಿದ್ದ "ತಿಂಗಳ ಹಕ್ಕಿ ಹಬ್ಬ"ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭೂಮಿಯಲ್ಲಿರುವ ಪರಿಸರವನ್ನು ಸಮತೋಲನದಲ್ಲಿಡಲು ಪಕ್ಷಿಗಳು ಪ್ರಮುಖ ಪಾತ್ರವನ್ನು ವಹಿಸುತ್ತವೆ. ಆದರೆ ಬೆಳೆಯುತ್ತಿರುವ ಇಂದಿನ ದಿನಗಳಲ್ಲಿ ವಿದ್ಯುತಂತಿ, ಮೊಬೈಲ್ ಟವರ್ಸ್, ಪರಿಸರ ಮಾಲಿನ್ಯ, ಬೇಟೆಯಾಡುವುದು, ಮರಗಳನ್ನು ಕಡಿಯುವುರಿಂದ ಪಕ್ಷಿಗಳಿಗೆ ಜೀವಿಸಲು ತೊಂದರೆಯಾಗುತ್ತಿದೆ. ಪಕ್ಷಿಗಳು ಮನುಷ್ಯನಂತೆಯೇ ಜೀವಿಸುವ ಪಕ್ಷಿಗಳ ವಿಶೇಷತೆಯನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡಲಾಗುತ್ತಿದೆ. ಆದ್ದರಿಂದ ಮಕ್ಕಳಾದ ನೀವು ಪ್ರಾಣಿ-ಪಕ್ಷಿಗಳ ಕುರಿತು ಮಾಹಿತಿಯನ್ನು ಪಡೆದು ಅವುಗಳನ್ನು ಉಳಿಸಿ, ಜೀವಿಸಲು ಸಹಾಯ ಮಾಡಬೇಕೆಂದು ತಿಳಿಸಿದರು.

ರಂಗಾಯಣ ಆಡಳಿತಾಧಿಕಾರಿಗಳಾದ ಶಶಿಕಲಾ ಹುಡೇದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿ, ಪರಿಸರದಲ್ಲಿ ಒಂದಕ್ಕೊಂದು ಸಂಬಂಧ ಹೊಂದಿದ ಜೀವ ವೈವಿಧ್ಯತೆಯ ಸರಪಳಿ ವ್ಯವಸ್ಥೆ ಇದೆ. ತಮ್ಮ ಅನುಕೂಲಕ್ಕಾಗಿ ಮನುಷ್ಯ ಪರಿಸರವನ್ನು ನಾಶ ಮಾಡುತ್ತಿದ್ದಾರೆ. ಆದರೆ ಪ್ರಾಣಿ-ಪಕ್ಷಿಗಳು ಪರಿಸರವನ್ನು ಸಂರಕ್ಷಣೆ ಮಾಡುತ್ತವೆ. ಆದ್ದರಿಂದ ಪಕ್ಷಿಗಳ ಕುರಿತು ತಿಳಿದುಕೊಳ್ಳಬೇಕು. ಅವುಗಳಿಗೆ ಹಾನಿ ಮಾಡಬಾರದು. ಪಕ್ಷಿಗಳಿಗೆ ಸಿಗಬೇಕಾದ ಮೂಲಭೂತ ಆಹಾರ, ನೀರು ಹಾಗೂ ಪ್ರೀತಿಯನ್ನು ನೀಡಿದರೆ, ಅವು ನಮಗೆ ಪ್ರತಿನಿತ್ಯ ಕೃತಜ್ಞತೆ ಸಲ್ಲಿಸುತ್ತವೆ. ಇದರಿಂದ ಪಕ್ಷಿಪ್ರೀಯರಾಗಿ ಪರಿಸರವನ್ನು ಉಳಿಸುವ ಜವಾಬ್ದಾರಿ ಮಕ್ಕಳ ಮೇಲಿದೆ ಎಂದರು.

ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ ವಿಜೇತರಾದ ಪ್ರಕಾಶ ಗೌಡರ ಅವರು ಮಕ್ಕಳಿಗೆ ಪಕ್ಷಿಗಳ ಕುರಿತು ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಶಿವಕುಮಾರ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಹೇಶ ಹಿರೇಮಠ, ವಲಯ ಅರಣ್ಯಾಧಿಕಾರಿ ಸ್ನೇಹಾ ಕಂಬಳಿ, ಚಿಣ್ಣರ ಮೇಳದ ಸಂಚಾಲಕರಾದ ಅರುಣಕುಮಾರ ಮೇದಾರ, ತರಬೇತುದಾ ರರಾದ ರಾಜ್ ಕವಡೆನವರ, ಸಾಮಾಜಿಕ ಅರಣ್ಯ ಇಲಾಖೆ ಹಾಗೂ ರಂಗಾಯಣ ಸಿಬ್ಬಂದಿ, ರೆಪರ್ಟರಿ ಕಲಾವಿದರು ಸೇರಿದಂತೆ ಇತರರು ಇದ್ದರು. ಸುನಂದಾ ನಿಂಬನಗೌಡರ ನಿರೂಪಿಸಿದರು.

# ಡಾ. ಅಂಬೇಡ್ಕರ್ ಜಯಂತ್ಯೋತ್ಸವ



**ಬೆಳಗಾವಿ ವಾರ್ತೆ ನವಲಗುಂದ:** ದೇಶದ ಪ್ರಜೆಗಳೆಲ್ಲ ಸಹೋದತ್ವ ಭಾವದಿಂದ ಬಾಳಲು ಅವಕಾಶ ಒದಗಿಸಿರುವ ನಮ್ಮ ಭಾರತೀಯ ಸಂವಿಧಾನವು ಈಡೀ ವಿಶ್ವಕ್ಕೆ ಮಾದರಿಯಾದ ಜಾತ್ಯಾತೀತ ಸಂವಿಧಾನವಾಗಿದ್ದು ಇಂತಹ ಸಂವಿಧಾನವನ್ನು ದೇಶಕ್ಕೆ ನೀಡಿದ ಡಾ.ಬಾಬಾಸಾಹೇಬ ಅಂಬೇಡ್ಕರ ಅವರ ಸಂವಿಧಾನದ ಮೂಲಕ ಇಂದಿಗೂ ನಮ್ಮೊಡನೆ ಜೀವಂತವಾಗಿದ್ದಾರೆಂದು ಗದುಗಿ ತೋಟದಾರ್ಯ ಮಠದ ಜಗದ್ಗುರು ಶ್ರೀ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಗಾಂಧೀ ಮಾರುಕಟ್ಟೆಯಲ್ಲಿ ತಾಲುಕಿನ ನಾನಾ ದಲಿತ ಸಂಘಟನೆಗಳು ಹಾಗೂ ತಾಲೂಕಾ ಅಡಳಿತದಿಂದ ಆಯೋಜಿಸಲಾಗಿದ್ದ ಡಾ.ಬಿ.ಆರ್.ಅಂಬೇಡ್ಕರ ಅವರ 135ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಡಾ.ಅಂಬೇಡ್ಕರ ಅವರ ಆದರ್ಶಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ತೋಟದಾರ್ಯ ಮಠದ ಹಿಂದಿನ ಶ್ರೀಗಳು ಶ್ರಾವಣ ಮಾಸದಲ್ಲಿ ಅಂಬೇಡ್ಕರ ಪುರಾಣವನ್ನು ಆಯೋಜಿಸಿದ್ದು ಇತರರಿಗೆ ಮಾದರಿಯಾಗಿದೆ ಎಂದರು.

ಶಾಸಕ ಎನ್.ಎಚ್.ಕೋನರಡ್ಡಿ ಮಾತನಾಡಿ ಡಾ.ಅಂಬೇಡ್ಕರ ಅವರು ನೀಡಿದ ಸಂವಿಧಾನದ ಫಲವಾಗಿ ವಿವಿಧತೆಯಲ್ಲಿ ಏಕತೆಯನ್ನು ಕಾಪಾಡಿಕೊಂಡು ಎಲ್ಲರೂ ಸಹಬಾಳ್ವೆ ನಡೆಸುತ್ತಿರುವುದೇ ಸಾಕ್ಷಿಯಾಗಿದ್ದು. ಬುದ್ದ,ಬವವ ಹಾಗೂ ಅಂಬೇಡ್ಕರ ಅವರ ಆಶಯದಂತೆ ರಾಜ್ಯ ಸರಕಾರವು ಹಲವಾರು ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯವನ್ನು ಮುನ್ನಡೆಸುತ್ತಿದ್ದು, ಅಂಬೇಡ್ಕರವರು ಸೂಚಿಸಿದಂತೆ ಶಿಕ್ಷಣ,ಹೋರಾಟ ಹಾಗೂ ಸಂಘಟನೆಯೊಂದಿಗೆ ಎಲ್ಲರೂ ಮುನ್ನಡೆಯೋಣ ಎಂದರು.

ಮಾಜಿ ಸಚಿವ ಶಂಕರ ಪಾಟೀಲ್ ಮುನೇನಕೊಪ್ಪ ಮಾತನಾಡಿ ಮಹಾ ಮಾನವತಾ ವಾದಿಯಾಗಿದ್ದ ಡಾ.ಅಂಬೇಡ್ಕರವರು ನಿರಂತರ ಅಧ್ಯಯನದಿಂದ ವಿಶ್ವ ಜ್ಞಾನಿಯಾಗಿ ದೇಶಕ್ಕೆ ಶ್ರೇಷ್ಠ ಸಂವಿಧಾನವನ್ನು ನೀಡುವುದರ ಜತೆಗೆ ದೇಶದ ಕಟ್ಟಕಡೆಯ ಮನುಷ್ಯನು ಗೌರವದಿಂದ ಬಾಳುವಂತೆ ಮಾಡಿದ್ದು ನಮ್ಮೆಲ್ಲರ ಭಾಗ್ಯ ಎಂದರು.

ಗವಿಮಠದ ಶ್ರೀ ಬಸವಲಿಂಗಸ್ವಾಮಿಜಿ, ಕೆಪಿಸಿಸಿ ಸದಸ್ಯ ವಿನೊದ್ ಅಸೂಟಿ, ಹಿರಿಯರಾದ ಈರಣ್ಣ ಸಿಡಗಂಟಿ,ದ್ಯಾಮಣ್ಣ ಹೊನ್ನಕುದರಿ, ಬಸವರಾಜ ಮುಧೋಳ, ಸತೀಶ್ ಜಿನಗಾ,ಮಹಾಂತೇಶ ಕಲಾಲ,ರಾಜು ನಡುವಿನಮನಿ, ಅಶೋಕ ಹಳೆಮನಿ, ಶಿವು ಪೂಜಾರ,ರಾಯನಗೌಡ ಪಾಟೀಲ್, ತಹಶೀಲ್ದಾರ ಸುಧೀರ ಸಾಹುಕಾರ,ಸಿಪಿಐ ರವಿ ಕಪ್ಪತ್ತನವರ,ತಾಪಂ ಇಒ ರವೀದ್ರಗೌಡ ಪಾಟೀಲ್,ಸಮಾಜ ಕಲ್ಯಾಣ ಅಧಿಕಾರಿ ಶೋಭಾ ಹಿರೇಮಠ ನಂದಿನಿ ಹಾದಿಮನಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಬೆಳಗಾವಿಯಲ್ಲಿ ಮರ್ಯಾದೆಗೇಡು ಹತ್ಯೆ: ಮಗಳನ್ನು ಕೊಂದು ಶವ ಸುಟ್ಟ ಕುಟುಂಬ



**ಬೆಳಗಾವಿ ವಾರ್ತೆ ಬೆಳಗಾವಿ:** ಮದುವೆಯಾಗಿರುವ ಮಗಳು ಪ್ರೀತಿಸಿದವನ ಜೊತೆ ಓಡಿ ಹೋಗಿದ್ದಾಳೆ ಎಂಬ ಕಾರಣಕ್ಕೆ ಮಗಳನ್ನು ಕೊಲೆ ಮಾಡಿ, ಬಳಿಕ ಸುಟ್ಟು ಹಾಕಿರುವ ಮರ್ಯಾದೆಗೇಡು ಹತ್ಯೆ ಬೆಳಗಾವಿಯಲ್ಲಿ ನಡೆದಿದ್ದು, ಇಡೀ ರಾಜ್ಯವೆ ಬೆಚ್ಚಿಬಿದ್ದಿದೆ.

ಬೆಳಗಾವಿ ಜಿಲ್ಲೆಯಲ್ಲಿ ಬೆಳಕಿಗೆ ಬಂದ ಮೊಟ್ಟ ಮೊದಲ ಮರ್ಯಾದೆಗೇಡು ಹತ್ಯೆ ಇದು. ತನ್ನ ಗಂಡನನ್ನು ಬಿಟ್ಟು ಪ್ರಿಯಕರನೊಂದಿಗೆ ಓಡಿಹೋಗಿದ್ದಾಳೆ ಎಂಬ ಕಾರಣಕ್ಕೆ ಸ್ವಂತ ಕುಟುಂಬದವರೇ ಯುವತಿಗೆ ವಿಷ ಕುಡಿಸಿ ಕೊಲೆ ಮಾಡಿ, ಸಾಕ್ಷ್ಯ ನಾಶಪಡಿಸಲು ಮೃತದೇಹವನ್ನು ಸುಟ್ಟು ಹಾಕಿರುವ ಭೀಕರ ಘಟನೆ ಬೆಳಕಿಗೆ ಬಂದಿದೆ. ಇದೀಗ ಆರೋಪಿಗಳನ್ನು ಬಂಧಿಸಲಾಗಿದೆ.

ಮುಚ್ಚಿಹಾಕಲಾಗಿದ್ದ ಪ್ರಕರಣವನ್ನು ಪೊಲೀಸ್ ಇನಸ್ಪೆಕ್ಟರ್ ಜಾವೀದ್ ಮುಶಾಪುರೆ ಚಾಣಾಕ್ಷತನದಿಂದ ಬಯಲಿಗೆಳೆದಿದ್ದಾರೆ.

ಹುಕ್ಕೇರಿ ತಾಲೂಕಿನ ನದಿಗುಡಿ ಕ್ಷೇತ್ರದ, 24 ವರ್ಷದ ಸತ್ಯವ್ವ ಸಂತೋಷ ಹೆಳವಿ ಎಂಬುವವಳೇ ಕೊಲೆಯಾದ ದುರ್ದೈವಿ. ಸತ್ಯವ್ವಳಿಗೆ ರಾಯಬಾಗ ತಾಲೂಕಿನ ಹಣಬರಟ್ಟಿಯ ಸಂತೋಷ ಹೆಳವಿ ಎನ್ನುವವನ ಜೊತೆ ಮದುವೆಯಾಗಿತ್ತು. ಆದರೆ ನದಿಗುಡಿ ಕ್ಷೇತ್ರದ ಕ್ಷತ್ರೀಯ ಜಾತಿಗೆ ಸೇರಿದ ಕೃಷ್ಣಾ ಸಹದೇವ ಪಾಟೀಲ ಎಂಬಾತನನ್ನು ಪ್ರೀತಿಸುತ್ತಿದ್ದ ಆಕೆ, ಇತ್ತೀಚೆಗೆ ತನ್ನ ಪತಿಯನ್ನು ಬಿಟ್ಟು ಆತನ ಜೊತೆ ಹೋಗಿದ್ದಳು. ಇದರಿಂದ ತಮ್ಮ ಕುಟುಂಬದ ಮರ್ಯಾದೆ ಹರಾಜಾಗಿದೆ ಎಂದು ಆಕ್ರೋಶಗೊಂಡಿದ್ದ ತವರು ಮನೆಯವರು ಆಕೆಗಾಗಿ ಹುಡುಕಾಟ ನಡೆಸಿದ್ದರು.

ಮಾರ್ಚ್ 13ರಂದು ಸತ್ಯವ್ವಳನ್ನು ಪತ್ತೆ ಹಚ್ಚಿದ ಕುಟುಂಬಸ್ಥರು, ಆಕೆಯ ಮನವೊಲಿಸಲು ಪ್ರಯತ್ನಿಸಿದ್ದಾರೆ. ಮಹಾರಾಷ್ಟ್ರದ ಶಿರೋಳಕ್ಕೆ ಕರೆದುಕೊಂಡು ಹೋಗಿ ಟೆಂಟ್ ಹಾಕಿ ಇಟ್ಟುಕೊಂಡು ಸತತ ಪ್ರಯತ್ನಿಸಿದರೂ ಆಕೆ ಒಪ್ಪಲಿಲ್ಲ. ತಮ್ಮದೇ ಜಾತಿಯ ಬೇರೆ ಹುಡುಗನ ಜೊತೆ ಮದುವೆ ಮಾಡುವುದಾಗೂ ಹೇಳಿದರು. ಆದರೂ ಒಪ್ಪದಿದ್ದಾಗ ಅರಗಕ್ಕೆ ಕರೆದುಕೊಂಡು ಹೋಗಿ ಆಕೆಗೆ ಮಧ್ಯರಾತ್ರಿ ಬಲವಂತವಾಗಿ ವಿಷ ಕುಡಿಸಿ, ಆಕೆಯನ್ನು ಭೀಕರವಾಗಿ ಹತ್ಯೆ ಮಾಡಿದ್ದಾರೆ. ಬಳಿಕ ಯಾರಿಗೂ ಸುಳಿವು ಸಿಗಬಾರದೆಂಬ ಉದ್ದೇಶದಿಂದ ಶವವನ್ನು ಅರಗದ ಸ್ಮಶಾನದಲ್ಲಿ ಸುಟ್ಟು ಹಾಕಿದ್ದಾರೆ.

ಈ ಬಗ್ಗೆ ಯಮಕನಮರಡಿ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಾಗಿದ್ದು ಪೊಲೀಸರು ತನಿಖೆ ಕೈಗೆತ್ತಿಕೊಂಡು ಅಮಾನವೀಯ ಕೃತ್ಯ ಬಯಲು ಮಾಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಯುವತಿಯ ಚಿಕ್ಕಪ್ಪ ಪ್ರಕಾಶ ಭೀಮಪ್ಪ ಹೆಳವರ (46), ಸಹೋದರ ಶಾನೂರ ಸದಾಶಿವ ಹೆಳವರ (35) ಮತ್ತು ಬಾವ ಮೊರಬದ ಕಲ್ಲಪ್ಪ ಮಾಯಪ್ಪ ಹೆಳವಿ (40) ಇವರನ್ನು ಬಂಧಿಸಲಾಗಿದ.

ಪತ್ತೆಯಾಗಿದ್ದೇ ರೋಚಕ : ಈ ಪ್ರಕರಣ ಪತ್ತೆಯಾಗಿದ್ದೇ ರೋಚಕ. ಸಂಪೂರ್ಣ ಮುಚ್ಚಿಹೋಗಿದ್ದ ಪ್ರಕರಣದ ಸುಳಿವು ಪಡೆದ ಯಮಕನಮರಡಿ ಪೊಲೀಸ್ ಇನಸ್ಪೆಕ್ಟರ್ ಜಾವೀದ್ ಅತ್ಯಂತ ಚಾಣಾಕ್ಷತನದಿಂದ ಬಯಲು ಮಾಡಿದ್ದಾರೆ. ಎಲ್ಲ ರೀತಿಯ ಪ್ರಯತ್ನದ ನಂತರ ಅಂತಿಮವಾಗಿ ಯುವತಿಯ ತಾಯಿಯನ್ನು ಭೇಟಿ ಮಾಡಿ, ಅವಳನ್ನು ವಿಶ್ವಾಸಕ್ಕೆ ತೆಗೆದುಕೊಂಡಿದ್ದಾರೆ. ನಿಮ್ಮದು ಹೆತ್ತ ಕರುಳು ಮಗಳ ಸಾವನ್ನು ಸಹಿಸಿಕೊಳ್ಳುವುದು ಕಷ್ಟ. ನಮಗೆ ಎಲ್ಲ ಗೊತ್ತಾಗಿದೆ, ಏನಾಯಿತು ನಿಜ ಹೇಳಿಬಿಡಿ ಎಂದು ಮನವೊಲಿಸಿದ್ದಾರೆ. ಆಗ ಅಳಲು ಆರಂಭಿಸಿದ ಆ ತಾಯಿ, ಎಲ್ಲ ಕಥೆಯನ್ನು ಬಿಚ್ಚಿಟ್ಟಳು.

ಇದೀಗ 3 ಆರೋಪಿಗಳನ್ನು ಬಂಧಿಸಲಾಗಿದೆ. ಮುಚ್ಚಿ ಹೋಗಿದ್ದ ಪ್ರಕರಣವನ್ನು ಬಯಲಿಗೆಳೆದಿದ್ದೇ ರೋಮಾಂಚಕ

# ಜಮಖಂಡಿಯಲ್ಲಿ ಪಿಯುಸಿ ಸಾಧಕ ವಿದ್ಯಾರ್ಥಿನಿ ಪ್ರೇರಣಾ ಸಂಜಯ್ ಚಲವಾದಿ ಪಾಲಕರಿಗೆ ಸನ್ಮಾನ



**ಬೆಳಗಾವಿ ವಾರ್ತೆ ಜಮಖಂಡಿ:** ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಜಮಖಂಡಿಯಲ್ಲಿ ಬಸವ ತತ್ವ ಟ್ರಸ್ಟ್ ವತಿಯಿಂದ ಪಿಯುಸಿ ಪರೀಕ್ಷೆಯಲ್ಲಿ 600ಕ್ಕೆ 590 ಅಂಕಗಳನ್ನು ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿನಿ ಕುಮಾರಿ ಪ್ರೇರಣಾ ಸಂಜಯ್ ಚಲವಾದಿ ಅವರ ಪಾಲಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕಸಾಪ ತಾಲೂಕು ಅಧ್ಯಕ್ಷ ಸಂತೋಷ ತಳಕೇರಿ ಮಾತನಾಡಿ, "ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಇಂತಹ ವಿಶಿಷ್ಟ ಸಾಧನೆ ಸಾಧಿಸುವುದು ದೊಡ್ಡ ವಿಷಯ. ಪ್ರೇರಣಾ ಅವರು ತಮ್ಮ ಪರಿಶ್ರಮ, ಶಿಸ್ತು ಮತ್ತು ಮನೋಬಲದಿಂದ ರಾಜ್ಯ ಮಟ್ಟದಲ್ಲಿ ಹೆಮ್ಮೆ ತರುವ ಸಾಧನೆ ಮಾಡಿದ್ದಾರೆ. ಇಂತಹ ವಿದ್ಯಾರ್ಥಿಗಳು ಸಮಾಜಕ್ಕೆ ಮಾದರಿಯಾಗುತ್ತಾರೆ" ಎಂದರು.

ಸರಕಾರಿ ಶಾಸಕರ ಮಾದರಿ ಶಾಲೆಯ ಮುಖ್ಯೋಪಾಧ್ಯಾಯ ಎ.ಆರ್. ಹೊಸಮನಿ ಮಾತನಾಡಿ, "ಅಂಬೇಡ್ಕರ್ ಅವರ ಶಿಕ್ಷಣದ ತತ್ವಗಳು ಇಂತಹ ಸಾಧನೆಗಳಿಗೆ ಪ್ರೇರಣೆ. ಪ್ರತಿಭಾವಂತರಿಗೆ ಪ್ರೋತ್ಸಾಹ ನೀಡಿದರೆ ಅವರು ಇನ್ನಷ್ಟು ಎತ್ತರಕ್ಕೆ ಏರುತ್ತಾರೆ. ಪ್ರೇರಣಾ ಅವರು ಮುಂದಿನ ದಿನಗಳಲ್ಲಿ ಐಎಎಸ್, ಐಪಿಎಸ್ ಹುದ್ದೆಗಳಲ್ಲಿ ಸಾಧನೆ ಮಾಡಲಿ" ಎಂದು ಹಾರೈಸಿದರು. ಸಾರಿಗೆ ನೌಕರರ ಎಸ್‌ಸಿ/ಎಸ್‌ಟಿ ಸಂಘದ ಕಾರ್ಯಕಾರಿ ಸಮಿತಿ ಸದಸ್ಯ ಪ್ರಭು ಬಿದರಿ ಮಾತನಾಡಿ, "ಶಿಕ್ಷಣವೇ ಶಕ್ತಿ ಎಂಬ ಅಂಬೇಡ್ಕರ್ ಅವರ ಸಂದೇಶವನ್ನು ಪ್ರೇರಣಾ ಅವರ ಸಾಧನೆ ಸಾಬೀತುಪಡಿಸಿದೆ. ಅವರು ಭವಿಷ್ಯದಲ್ಲಿ ದೇಶ ಸೇವೆಗೆ ತೊಡಗಿಸಿಕೊಳ್ಳಲಿ" ಎಂದರು.

ವಿದ್ಯಾರ್ಥಿನಿಯ ತಂದೆ ಸಂಜಯ್ ಚಲವಾದಿ ಮಾತನಾಡಿ, "ಪ್ರೇರಣಾ ಬಾಲ್ಯದಿಂದಲೇ ಪರಿಶ್ರಮಿ. ಎಲ್‌ಕೆಜಿ ಇಂದಲೇ ಪ್ರಥಮ ಸ್ಥಾನ ಕಾಯ್ದುಕೊಂಡು ಬಂದಿದ್ದಾಳೆ. ಪಿಯುಸಿಯಲ್ಲಿ ಗಣಿತ ಹಾಗೂ ಜೀವ ವಿಜ್ಞಾನದಲ್ಲಿ 100ಕ್ಕೆ 100 ಅಂಕಗಳನ್ನು ಗಳಿಸಿರುವುದು ಹೆಮ್ಮೆ ತಂದಿದೆ. ಅವಳು ಭವಿಷ್ಯದಲ್ಲಿ ಐಎಎಸ್ ಆಗಿ ಸಮಾಜ ಸೇವೆ ಮಾಡುವ ಕನಸು ಹೊಂದಿದ್ದಾಳೆ" ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರ ಸಂಘದ ನಿರ್ದೇಶಕರು ಅರವಿಂದ ನವನಿ, ಮಹದೇವ ಪೋತರಾಜ, ಜಗದೀಶ ಕಾಂಬಳೆ, ಟಿ.ಎಸ್. ನಾಗರಾಳ, ಶ್ರೀಶೈಲ ಚಲವಾದಿ, ಶ್ರೀಮತಿ ನಿಜವ್ವಾ ಚಲವಾದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗೃಹಲಕ್ಷ್ಮಿಯೇ ಆಧಾರ: ಪಿಂಚಣಿ ಇಲ್ಲದೆ ವೃದ್ಧೆಯ ಬದುಕು ಸಂಕಷ್ಟ




**ಬೆಳಗಾವಿ ವಾರ್ತೆ ಬಾಗಲಕೋಟೆ:** ಸರ್ಕಾರದ ಪಿಂಚಣಿ ಯೋಜನೆಗಳ ನಡುವೆಯೇ ಒಬ್ಬ ವಯೋವೃದ್ಧೆಯ ಸಂಕಷ್ಟದ ಬದುಕು ಕಣ್ಣೀರಾಗಿಸುವಂತಿದೆ. ರಬಕವಿ-ಬನಹಟ್ಟಿ ತಾಲೂಕಿನ ತೇರದಾಳದ ದೇವರಾಜನಗ ರದಲ್ಲಿ ವಾಸಿಸುವ 84 ವರ್ಷದ ಕುತಿಜಾಬಿ ರಾಜೇಸಾಬ ಪಠಾಯತ, ಕಳೆದ ಒಂದು ವರ್ಷದಿಂದ ಪಿಂಚಣಿಗಾಗಿ ಅಧಿಕಾರಿಗಳ ಬಾಗಿಲು ತಟ್ಟುತ್ತಿದ್ದರೂ ನ್ಯಾಯ ಸಿಗದೇ ಸಂಕಷ್ಟದಲ್ಲಿದ್ದಾರೆ. **ಆಧಾರ್ ದೋಷವೇ ಜೀವದ ಸಂಕಷ್ಟ:** ಕುತಿಜಾಬಿಯ ನಿಜವಾದ ವಯಸ್ಸು 84 ವರ್ಷವಾದರೂ, ಆಧಾರ್ ಕಾರ್ಡ್‌ನಲ್ಲಿ 48 ವರ್ಷ ಎಂದು ದಾಖಲಾಗಿರುವುದು ದೊಡ್ಡ ಸಮಸ್ಯೆಯಾಗಿದೆ. ಈ ತಾಂತ್ರಿಕ ದೋಷದಿಂದಲೇ ಕಳೆದ ಒಂದು ವರ್ಷದಿಂ ದ ಅವರಿಗೆ ದೊರೆಯುತ್ತಿದ್ದ ಮಾಸಿಕ 1200 ಪಿಂಚಣಿ ಸಂಪೂರ್ಣ ಸ್ಥಗಿತಗೊಂಡಿದೆ. **ಅಧಿಕಾರಿಗಳ ಬಳಿ ಅಲೆದಾಟ :** ಪಿಂಚಣಿ ಮರುಪ್ರಾರಂಭಿಸಲು ಅವರು ಹಲವಾರು ಬಾರಿ ಅರ್ಜಿ ಸಲ್ಲಿಸಿದ್ದು, ರಬಕವಿ-ಬನಹಟ್ಟಿಯ ಕಛೇರಿಗಳಿಗೆ ಹಲವಾರು ಬಾರಿ ಅಲೆದಿದ್ದಾರೆ. ಆದರೂ ಯಾವುದೇ ಪರಿಹಾ ರ ದೊರಕದೇ ಮನೆಗೆ ಮರಳಬೇಕಾದ ಸ್ಥಿತಿ ನಿರ್ಮಾಣವಾಗಿದೆ. **ಬದುಕಿಗಾಗಿ ಹೋರಾಟ :** ಈ ಹಿಂದೆ ಮಾರುಕಟ್ಟೆಯಲ್ಲಿ ಕಾಯಿಪಲ್ಲೆ ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದ ಕುತಿಜಾಬಿ, ಈಗ ವಯೋಸಹಜ ಸಮಸ್ಯೆಯಿಂದ ಮನೆಗಳಲ್ಲಿ ಪಾತ್ರೆ ತೊಳೆಯುವ ಕೆಲಸ ಮಾಡಿ ಬದುಕು ಸಾಗಿಸುತ್ತಿದ್ದಾರೆ. ದಿನನಿತ್ಯ ಊಟ ಮತ್ತು ಔಷಧ ಖರ್ಚಿಗೂ ಹಣ ಇಲ್ಲದ ಸ್ಥಿತಿ ಎದುರಿಸುತ್ತಿದ್ದಾರೆ. **ಗೃಹಲಕ್ಷ್ಮಿ ಯೋಜನೆ ಮಾತ್ರ ಆಧಾರ :** ಪ್ರಸ್ತುತ ರಾಜ್ಯ ಸರ್ಕಾರದ ಗ್ಯಾರಂಟಿ ಯೋ ಜನೆಯಾದ ಗೃಹಲಕ್ಷ್ಮಿ ಯೋಜ ನೆಯಿಂದ ಸಿಗುತ್ತಿರುವ ಸಹಾಯವೇ ಅವರ ಬದುಕಿಗೆ ಒಂದೇ ಆಧಾರವಾಗಿದೆ ಎಂದು ಅವರು ಹೇಳಿದ್ದಾರೆ.

# ಕೊನ್ನೂರು ಮಡ್ಡಿ ಪ್ಲಾಟ್ ನಿವಾಸಿಗಳ ಧರಣಿ ಸತ್ಯಾಗ್ರಹ: ಹಕ್ಕುಪತ್ರಕ್ಕೆ ಆಗ್ರಹ



**ಬೆಳಗಾವಿ ವಾರ್ತೆ ಜಮಖಂಡಿ:** ತಾಲೂಕಿನ ಕೊನ್ನೂರು ಗ್ರಾಮದ ಮಡ್ಡಿ ಪ್ಲಾಟ್ ನಿವಾಸಿಗಳು ತಮ್ಮ ಹಕ್ಕುಪತ್ರ ಹಾಗೂ ಇತರ ಮೂಲಭೂತ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ತಾಲೂಕು ಪಂಚಾಯತಿ ಕಚೇರಿ ಎದುರು ಧರಣಿ ಸತ್ಯಾಗ್ರಹ ಆರಂಭಿಸಿದ್ದಾರೆ.

ಈ ಸಂದರ್ಭದಲ್ಲಿ ಗದಗೆಪ್ಪ ಧಾರವಾಡ ಮಾತನಾಡಿ, ಕಳೆದ ಐದು-ಆರು ವರ್ಷಗಳಿಂದ ನಿರಂತರವಾಗಿ ಹಕ್ಕುಪತ್ರಕ್ಕಾಗಿ ಮನವಿ ಸಲ್ಲಿಸಿ ಹೋರಾಟ ನಡೆಸುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಕೇವಲ ಭರವಸೆ ನೀಡುತಲೇ ಬಂದಿದ್ದಾರೆ ಎಂದು ಆರೋಪಿಸಿದರು. ಈ ಹಿನ್ನೆಲೆ ಇಂದು ಮೌನ ಪ್ರತಿಭಟನೆ ರೂಪದಲ್ಲಿ ಸತ್ಯಾಗ್ರಹ ಆರಂಭಿಸಿದ್ದು, ಬೇಡಿಕೆಗಳು ಈಡೇರಿಸುವವರೆಗೆ ಉಪವಾಸ ಸತ್ಯಾಗ್ರಹ ಮುಂದುವರಿಸುವುದಾಗಿ ತಿಳಿಸಿದ್ದಾರೆ.

"ನಮಗೆ ದಿನಾಂಕ ಹಾಕಿ ಮುಂದೂಡುವ ಭರವಸೆ ಬೇಡ. ನಮ್ಮ ಸಮಸ್ಯೆ ಕುರಿತು ಸ್ಪಷ್ಟ ನಿರ್ಧಾರ ತೆಗೆದುಕೊಂಡು, ಲಿಖಿತ ರೂಪದಲ್ಲಿ ಮಾಹಿತಿ ನೀಡಬೇಕು. ಇಲ್ಲದಿದ್ದರೆ ಹೋರಾಟವನ್ನು ತೀವ್ರಗೊಳಿಸಲಾಗುವುದು," ಎಂದು ಅವರು ಎಚ್ಚರಿಸಿದರು.

ಸುಮಾರು 30 ವರ್ಷಗಳಿಂದ ಹಕ್ಕುಪತ್ರ ಮತ್ತು ಸತ್ತು ಉತಾರಕ್ಕಾಗಿ ಹೋರಾಟ ನಡೆಯುತ್ತಿದ್ದು, 1992ರಿಂದ 1996ರ ಅವಧಿಯಲ್ಲಿ ಸುಮಾರು 120 ಹಕ್ಕುಪತ್ರಗಳನ್ನು ನೀಡಲಾಗಿದೆ. ಆದರೆ ಅವುಗಳಿಗೆ ಸಂಬಂಧಿಸಿದ ದಾಖಲೆಗಳು ಗ್ರಾಮ ಪಂಚಾಯತಿ ದಾಖಲೆಯಲ್ಲಿ ಇದ್ದರೂ, ಅಧಿಕಾರಿಗಳು ಅವನ್ನು ಅನಧಿಕೃತವೆಂದು ಹೇಳುತ್ತಿರುವುದು ಅನ್ಯಾಯ ಎಂದು ಪ್ರತಿಭಟನಾಕಾರರು ದೂರಿದರು.

ಮಡ್ಡಿ ಪ್ಲಾಟ್ ಪ್ರದೇಶವು ಸರ್ಕಾರದ ಜಾಗವಾಗಿದ್ದು, ತಾಲೂಕ್ ಪಂಚಾಯತಿ ಹೆಸರಿನಲ್ಲಿ 27 ಎಕರೆ ಪ್ರದೇಶವಿದೆ. ಇದರಲ್ಲಿ ಈಗಾಗಲೇ 8 ಎಕರೆ ಅಂಬೇಡ್ಕರ್ ವಸತಿ ಶಾಲೆಗೆ ಮೀಸಲಿಡಲಾಗಿದೆ.

ಉಳಿದ 19 ಎಕರೆ ಜಾಗದಲ್ಲಿ ಯೋಗ್ಯ ಫಲಾನುಭವಿಗಳಿಗೆ ಮನೆ ನಿರ್ಮಿಸಿ ಹಕ್ಕುಪತ್ರ ನೀಡಬೇಕು ಹಾಗೂ ಈಗಾಗಲೇ ಹಕ್ಕುಪತ್ರ ಪಡೆದವರಿಗೆ ತಕ್ಷಣ ಸತ್ತು ಉತಾರ ನೀಡಬೇಕು ಎಂಬುದು ನಿವಾಸಿಗಳ ಮುಖ್ಯ ಬೇಡಿಕೆಯಾಗಿದೆ.

ಪ್ರತಿಭಟನೆ ಶಾಂತಮಯವಾಗಿ ನಡೆಯುತ್ತಿದ್ದು, ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಜಾಗ್ರತೆ ವಹಿಸಲಾಗಿದೆ. ಬೇಡಿಕೆ ಈಡೇರಿಸುವವರೆಗೆ ಹೋರಾಟ ಮುಂದುವರಿಸುವುದಾಗಿ ನಿವಾಸಿಗಳು ತಿಳಿಸಿದ್ದಾರೆ.

# ಚಾಲಕನ ನಿಯಂತ್ರಣ ತಪ್ಪಿ ಟಾಟಾ ಐಚರ್ ವಾಹನ ಮರಕ್ಕೆ ಡಿಕ್ಕಿ – ತಪ್ಪಿದ ಭಾರಿ ಅನಾಹುತ



**ಬೆಳಗಾವಿ ವಾರ್ತೆ ಜಮಖಂಡಿ:** ತಾಲೂಕಿನ ಮದರಖಂಡಿ ಕ್ರಾಸ್ ಹತ್ತಿರ ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಟಾಟಾ ಐಚರ್ ವಾಹನ ಮರಕ್ಕೆ ಡಿಕ್ಕಿ ಹೊಡೆದ ಘಟನೆ ನಡೆದಿದೆ. ಭಾಗ್ಯವಶಾತ್ ಭಾರಿ ಅನಾಹುತ ತಪ್ಪಿದೆ.

ಜಮಖಂಡಿ ತಾಲೂಕಿನ ತುಂಗಳ ಗ್ರಾಮದ ಸಿದ್ದು ನ್ಯಾಮಗೌಡ ಎಂಬುವರ ಟಾಟಾ ಐಚರ್ ವಾಹನ ಎಂದು ಗುರುತಿಸಲಾಗಿದೆ. ರಬಕವಿ-ಬನಹಟ್ಟಿ ತಾಲೂಕಿನ ಹಳೆಯಳಗುದ್ರಿ ಗ್ರಾಮದಿಂದ ತುಂಗಳ ಗ್ರಾಮಕ್ಕೆ ತೆರಳುವ ವೇಳೆ ಈ ಅಪಘಾತ ಸಂಭವಿಸಿದೆ.

ಘಟನೆಯ ವೇಳೆ ವಾಹನದಲ್ಲಿ ಚಾಲಕ ಸೇರಿ ಮೂವರು ಪ್ರಯಾಣಿಸುತ್ತಿದ್ದು, ಒಬ್ಬನ ಕಾಲು ಮುರಿದಿದ್ದು, ಇತರ ಇಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಈ ಘಟನೆ ಜಮಖಂಡಿ ಗ್ರಾಮೀಣ ಪೊಲಿಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಏಪ್ರೀಲ್ 18 ರಂದು ಸ್ಮೃತಿ ಸುಮನ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಅಥಣಿ :** ಪಟ್ಟಣದ ಜೆ ಇ ಶಿಕ್ಷಣ ಸಂಸ್ಥೆಯ ಶ್ರೀ ಕೆ ಎ ಲೋಕಾಪೂರ ಪದವಿ ಮಹಾವಿದ್ಯಾಲಯದಲ್ಲಿ ಕಲಿತ ಹಿಂದಿನ 20 ಬ್ಯಾಚಿನ ವಿದ್ಯಾರ್ಥಿಗಳನ್ನು ಒಂದೆಡೆ ಸೇರಿಸಿ ಎರಡು ದಶಕಗಳ ಪಯಣವನ್ನು ಸ್ಮರಿಸುವ ನಿಟ್ಟಿನಲ್ಲಿ ಸ್ಮೃತಿ ಸುಮನ ಎಂಬ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಈ ಕಾರ್ಯಕ್ರಮಕ್ಕೆ ನಮ್ಮ ಪದವಿ ಮಹಾವಿದ್ಯಾಲಯದಲ್ಲಿ ಕಲಿತ ಎಲ್ಲ ಹಿಂದಿನ ವಿದ್ಯಾರ್ಥಿಗಳು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿಬೇಕೆಂದು ಅರವಿಂದರಾವ ದೇಶಪಾಂಡೆ ಅವರು ಮನವಿ ಮಾಡಿದರು.

ಅವರು ಸಂಸ್ಥೆಯ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಸುದ್ದಿಘೋಷ್ಠಿಯಲ್ಲಿ ಮಾತನಾಡಿ ಇದೆ ಏಪ್ರೀಲ್ 18 ರಂದು ಬೆಳಿಗ್ಗೆ 09:30 ಕ್ಕೆ ಭೋಜರಾಜ ದೇಸಾಯಿ ಕ್ರೀಡಾಂಗಣದಲ್ಲಿ ಕಾರ್ಯಕ್ರಮ ಆಯೋಜಸಲಾಗಿದೆ. ನಮ್ಮ ಸಂಸ್ಥೆಯ ಬೆನ್ನೆಲುಬು ನಮ್ಮಲ್ಲಿ ಕಲಿತ ಹಿಂದಿನ ವಿದ್ಯಾರ್ಥಿಗಳು, ಪದವಿ ಮಹಾವಿದ್ಯಾಲಯದಲ್ಲಿ ಕಲಿತ ಎಲ್ಲರನ್ನು ಒಂದೆಡೆ ಸೇರಿಸಿ ಸವಿ ನೆನಪುಗಳನ್ನು ಮೆಲುಕು ಹಾಕಲು ಹಾಗೂ ಮಹಾವಿದ್ಯಾಲಯದ ಸಾಧನೆ ತಿಳಿಸಲು ಹಾಗೂ ಮುಂದಿನ ಯೋಜನೆಗಳ ಕುರಿತು ಮಾಹಿತಿ ಹಂಚಿಕೊಳ್ಳುವುದಾಗಿದೆ ಎಂದರು.

ಅನಂತರ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ ರಾಮ ಕುಲಕರ್ಣಿ ಅವರು ಮಾತನಾಡಿ ಹಿಂದಿನ ವಿದ್ಯಾರ್ಥಿಗಳನ್ನು ಸೇರಿಸಿ ಅವರೆಲ್ಲರ ಸಾಧನೆಗಳನ್ನು ಗುರಿತಿಸುವುದು, ಮಹಾವಿದ್ಯಾಲಯದ ಪ್ರಗತಿ ಕುರಿತು ಚರ್ಚಿಸಲು ಹಾಗೂ ಮುಂದಿನ ಯೋಜನೆಗಳ ಮಾಹಿತಿ ನೀಡಲಿದ್ದೆವೆ ಅದಕ್ಕಾಗಿ ನಮ್ಮ ಪದವಿ ಮಹಾವಿದ್ಯಾಲಯದಲ್ಲಿ ಕಲಿತ ಎಲ್ಲ ಹಳೆಯ ವಿದ್ಯಾರ್ಥಿಗಳು ಹಾಜರಾಗಿ ತಮ್ಮ ಸಲಹೆ ಸೂಚನೆ ನೀಡಬೇಕು ಹಾಗೂ ತಮ್ಮ ಹಳೆಯ ಸವಿ ನೆನಪುಗಳನ್ನು ಮೆಲುಕು ಹಾಕಬಹುದು ಎಂದರು.

ಅನಂತರ ಎಸ್ ವಿ ಜೋಶಿ ಅವರು ಮಾತನಾಡಿದರು.

ಈ ವೇಳೆ ಸುಹಾಸ್ ದಾತಾರ್, ಎಸ್ ಎಮ್ ಪಾಟೀಲ, ಆರ್ ಎ ಕುಲಕರ್ಣಿ, ಎಸ್ ವಿ ಜೋಶಿ, ಶ್ರೀವತ್ಸ ಕುಲಕರ್ಣಿ, ಹೃಷಿಕೇಶ ದೇಶಪಾಂಡೆ, ಡಾ ವಿಜಯಕುಮಾರ ಚೈನಿ, ರವಿ ಬಡಕಂಬಿ, ಸಂತೋಷ ಬಡಕಂಬಿ, ಅಭಿನಂದನ ಪಡನಾಡ, ಆರ್ ಎಮ್ ದೇವರಡ್ಡಿ, ಆರ್ ಎ ನಾಯಕ, ಜಿ ಎಮ್ ಕುಲಕರ್ಣಿ, ಎನ್ ಬಿ ಝುರೆ, ಬಾಳೇಶ ಬಮನಾಳೆ, ಬಿ ಪಿ ಗುಂಡಾ, ಯೋಗೇಶ ಕುಲಕರ್ಣಿ, ಬಸವರಾಜ ಹಿಪ್ಪಲಕರ, ಲಕ್ಕಪ್ಪ ನಾಯಿಕ, ಶ್ರೀನಿವಾಸ ಪಟ್ಟಣ ಸೇರಿದಂತೆ ಅನೇಕರಿದ್ದರು.

# ಸವದಿ ಗ್ರಾಮದಲ್ಲಿ 18 ಕೋಟಿ ವೆಚ್ಚದ ವಿದ್ಯುತ್ ವಿತರಣಾ ಕೇಂದ್ರಕ್ಕೆ ಶಾಸಕ ಲಕ್ಷ್ಮಣ ಸವದಿ ಭೂಮಿ ಪೂಜೆ



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಸವದಿ ಗ್ರಾಮದ ಆರ್. ಸಿ. ಕೇಂದ್ರದಲ್ಲಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ವತಿಯಿಂದ ನಿರ್ಮಿಸಲಾಗುತ್ತಿರುವ 2ಥ20 ಎಂ.ವಿ.ಎ. 110/11 ಕೆವಿ ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರಕ್ಕೆ ಶಾಸಕ ಲಕ್ಷ್ಮಣ ಸವದಿ ಅವರು ಶಂಕುಸ್ಥಾಪನೆ ನೆರವೇರಿಸಿದರು.

ಸುಮಾರು 18 ಕೋಟಿ ರೂಪಾಯಿ ವೆಚ್ಚದಲ್ಲಿ ಈ ಬೃಹತ್ ಯೋಜನೆ ಸಾಕಾರ ಗೊಳ್ಳುತ್ತಿದ್ದು, ಈ ಭಾಗದ ರೈತರ ಹಾಗೂ ಸಾರ್ವಜನಿಕರ ದಶಕಗಳ ಕಾಲದ ವಿದ್ಯುತ್ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲಿದೆ.

**ಗುಣಮಟ್ಟದ ಕಾಮಗಾರಿಗೆ ಶಾಸಕರ ಶ್ಲಾಘನೆ:** ಈ ಯೋಜನೆಯ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವ 'ಆಶೀರ್ವಾದ ಎಲೆಕ್ಟ್ರಿಕಲ್ಸ್' ಸಂಸ್ಥೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಶಾಸಕರು, "ಸುಮಾರು 50 ವರ್ಷಗಳಿಂದ ವಿದ್ಯುತ್ ಕ್ಷೇತ್ರದಲ್ಲಿ ಅತ್ಯಂತ ಯಶಸ್ವಿಯಾಗಿ ಮತ್ತು ನಂಬಿಕಸ್ತವಾಗಿ ಕಾರ್ಯನಿರ್ವಹಿಸುತ್ತಿರುವ ಆಶೀರ್ವಾದ ಎಲೆಕ್ಟ್ರಿಕಲ್ಸ್ ಸಂಸ್ಥೆಯು ಈ ಭಾಗದ ಕೆಲಸವನ್ನು ವಹಿಸಿಕೊಂಡಿರುವುದು ಸಂತೋಷದ ವಿಷಯ. ಅವರ ಅನುಭವ ಮತ್ತು ಗುಣಮಟ್ಟದ ಕೆಲಸ ಈ ಯೋಜನೆಗೆ ಪೂರಕವಾಗಿದೆ," ಎಂದು ಅಭಿನಂದಿಸಿದರು.

ಈ ವೇಳೆ ಕೆ . ಪಿ.ಟಿ.ಸಿ.ಎಲ್.ಮೇಜರ್ ವರ್ಕ್ಸ್ ಅಪ್ಪನಗೋಳ, ಎ . ಈ.ಈ.ಸಂಜಯ್ ಗೊಂಜಾಲವಿಸ್ಟ್ , ಈ . ಈ.ಸಂಪನ್ನವರ,ಎಸ್.ಎ.ಪಾರ್ಥನಳ್ಳಿ, ಆನಂದ ರಾವ್ ದೇಶಪಾಂಡೆ,ಆಶೀರ್ವಾದ ಎಲೆಕ್ಟ್ರಿಕಲ್ ಗುತ್ತಿಗೆದಾರ ಅಜಯ ದೇಶಪಾಂಡೆ, ಎ . ಈ.ಈ.ಪ್ರದೀಪ್,ರಾಚಗೌಡ ಪಾಟೀಲ್, ಗುರುಲಿಂಗ ಗಾಳಿ , ಅಶೋಕ್ ಸನಾಳ, ತಮ್ಮನ್ನ ರಬಕವಿ, ಮಲಗೌಡ ಪಾಟೀಲ್, ಮಲ್ಲಪ್ಪ ಅವಟಿ ಸೇರಿದಂತೆ ಸವದಿ ಗ್ರಾಮ ಮತ್ತು ಸುತ್ತಮುತ್ತಲ ಪ್ರದೇಶದ ರೈತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು

> "ನಮ್ಮ ಭಾಗದ ಅಭಿವೃದ್ಧಿಯಲ್ಲಿ ವಿದ್ಯುತ್ ಶಕ್ತಿ ಅತ್ಯಂತ ಪ್ರಮುಖವಾದುದು. ಸವದಿ ಮತ್ತು ಸುತ್ತಮುತ್ತಲ ಗ್ರಾಮಗಳ ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗದಿದ್ದರೆ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗುತ್ತದೆ ಎಂಬುದನ್ನು ಮನಗಂಡು ಈ 110/11 ಕೆವಿ ಕೇಂದ್ರವನ್ನು ಮಂಜೂರು ಮಾಡಿಸಲಾಗಿದೆ. 18 ಕೋಟಿ ರೂಪಾಯಿ ವೆಚ್ಚದ ಈ ಕೇಂದ್ರ ಕಾರ್ಯಾರಂಭ ಮಾಡಿದರೆ, ಕಡಿಮೆ ವೋಲ್ಟೇಜ್ ಸಮಸ್ಯೆ ನಿವಾರಣೆಯಾಗಿ ನಿರಂತರ ವಿದ್ಯುತ್ ಸಂಪರ್ಕ ಸಿಗಲಿದೆ. ನಿಗದಿತ ಅವಧಿಯೊಳಗೆ ಕಾಮಗಾರಿ ಮುಗಿಸಿ ಜನರಿಗೆ ಅನುಕೂಲ ಮಾಡಿಕೊಡಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ."

# ಅಂಬೇಡ್ಕರರು ಸಂಘಟನೆ, ಶಿಕ್ಷಣ, ಏಕತೆಯ ಚಿಂತಕರು–ಕುಂಬಾರ

**ಬೆಳಗಾವಿ ವಾರ್ತೆ ಮೂಡಲಗಿ :** ಡಾ.ಬಿ.ಆರ್. ಅಂಬೇಡ್ಕರರು ಸಂಘಟನೆ ಮತ್ತು ಶಿಕ್ಷಣ ಹಾಗೂ ಸಮುದಾಯದ ಏಕತೆಯ ಚಿಂತಕರಾಗಿ ಮಹತ್ವದ ಪಾತ್ರವಹಿಸದಲ್ಲದೇ ಭಾರತದ ಸಂವಿಧಾನ ರಚನೆಯಲ್ಲಿ ಅಗ್ರ ಗಣ್ಯರಾಗಿ ಗುರ್ತಿಸಿಲ್ಪಟ್ಟಿದ್ದು ಸಂವಿಧಾನ ಭಾರತದ ಪ್ರತಿ ನಾಗರಿಕನಿಗೆ ನ್ಯಾಯ ಕಾನೂನು ಜೀವನ ನಿರ್ವಹಣೆಯ ಸಮಾನತೆ ಒದಗಿಸುವಲ್ಲಿ ಅಂಬೇಡ್ಕರರು ಪಾತ್ರ ಮಹತ್ವದಾಗಿದೆ ಎಂದು ಮೂಡಲಗಿಯ ಆರ್.ಡಿ.ಎಸ್ ಪಿಯು ಕಾಲೇಜಿನ ಉಪನ್ಯಾಸಕ ಸಂಗಮೇಶ ಕುಂಬಾರ ಹೇಳಿದರು.

ಪಟ್ಟಣದ ಆರ್.ಡಿ.ಎಸ್. ಕಲಾ, ವಾಣಿಜ್ಯ, ವಿಜ್ಞಾನ, ಸಮಾಜಕಾರ್ಯ ಪದವಿ ಮಹಾವಿದ್ಯಾಲಯ ಮತ್ತು ರಾಣಿಚೆನ್ನಮ್ಮಾ ವಿಶ್ವವಿದ್ಯಾಲಯ ಬೆಳಗಾವಿ ಹಾಗೂ ಪಿಯು ಕಾಲೇಜು ಶ್ರೀ ವಿದ್ಯಾನಿಕೇತನ ಪ್ರಾಥಮಿಕ ಪ್ರೌಢ ಶಾಲೆಗಳ ಸಹಯೋಗದಲ್ಲಿ ಹಮ್ಮಿಕೊಂಡಿರುವ ಡಾ. ಬಿ.ಆರ್.ಅಂಬೇಡ್ಕರರ ಜಯಂತಿ ಕಾರ್ಯಕ್ರಮದಲ್ಲಿ ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಸಾಮಾಜಿಕ ಕಳಕಳಿಯ ಮೇಲೆ ಸಾಮಾಜಿಕ ದೌರ್ಜನ್ಯಗಳನ್ನು ವಿರೋದಿಸಿ ಸಾಮಾಜಿಕ ವ್ಯವಸ್ಥೆಯಿಂದ ವಂಚಿತರಾದ ವಿವಿಧ ವರ್ಗದ ಸಮುದಾಯಗಳಿಗೆ ನ್ಯಾಯ ಒದಗಿಸುವಲ್ಲಿ ಅಂಬೇಡ್ಕರರ ವಿಚಾರದಾರೆಗಳು ಅಜರಾಮರವಾಗಿವೆ ಎಂದರು.

ಶ್ರೀ ವಿದ್ಯಾನಿಕೇತನ ಶಾಲೆಯ ಮುಖ್ಯೋಪಾದ್ಯಾಯ ಸಂಗಮೇಶ ಹಳ್ಳೂರ ಮಾತನಾಡಿ, ಅಂಬೇಡ್ಕರರ ಜಯಂತಿ ಕೇವಲ ಆಚರಣೆಗೆ ಸೀಮಿತವಾಗಿರ ಬಾರದು ಅಂಬೇಡ್ಕರರು ಚಿಂತನೆ ವಿಚಾರಗಳು ಸೂರ್ಯ ಚಂದ್ರರು ಭೂಮಿಯ ಮೇಲೆ ಇರುವವರೆಗೂ ಅವರು ಹೆಸರು ಚೀರಸ್ಥಾಯಿಯಾಗಿರುವಂತೆ ಇದ್ದು ಅಂಬೇಡ್ಕರರು ಸಮಾಜದ ದೌರ್ಜನ್ಯಗಳನ್ನು ಹೋಗಲಾಡಿಸಿ ಸಾಮಾಜಿಕ ಭದ್ರತೆಗೆ ಸ್ಫೂರ್ತಿಯನ್ನು ತುಂಬಿದ ದೀವ್ಯಚೇತನವಾಗಿದ್ದರು ಎಂದರು.

ಪದವಿ ಕಾಲೇಜು ಪ್ರಾಚಾರ್ಯ ಸತೀಶ ಗೋಟೂರೆ ಮಾತನಾಡಿ ಅಂಬೇಡ್ಕರರ ಜೀವನ ನಾವು ಅಂದುಕೊಂಡಷ್ಟು ಸರಳತೆಯಿಂದ ಕೂಡಿರಲಿಲ್ಲಾ ಕಷ್ಟಕರ ಜೀವನ ಅವರದಾಗಿತ್ತು ಅಂತಹ ಕಷ್ಟದಲ್ಲಿಯೇ ಓದಿ ಸಾಧಿಸಿ ಸಂವಿದಾನ ರಚಿಸಿದರು ಅವರ ಜೀವನದ ಆದರ್ಶಗಳು ಪ್ರತಿಯೊಬ್ಬ ವಿದ್ಯಾರ್ಥಿಗಳು ಅಳವಡಿಸಿಕೊಳ್ಳುವುದು ಅಗತ್ಯವಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಿಯು ಕಾಲೇಜಿನ ಪ್ರಾಚಾರ್ಯ ಶಿವಾನಂದ ಸತ್ತಿಗೇರಿ ವಹಿಸಿಕೊಂಡಿದ್ದರು ಎನ್.ಎಸ್.ಎಸ್. ಘಟಕಾಧಿಕಾರಿ ರಾಜು ಪತ್ತಾರ, ರೆಡ್ ಕ್ರಾಸ ಘಟಕಾಧಿಕಾರಿ ಮುತ್ತಣ್ಣ ಒಡೆಯರ ಸುಭಾಸ ಮಾಲೋಜಿ ಉಮೇಶ ಪುಟ್ಟಿ ಸಂಜೀವ ಮಂಟೂರ ಮತ್ತಿತರರು ಹಾಜರಿದ್ದರು . ಉಪನ್ಯಾಸಕ ಮುತ್ತಣ್ಣ ಒಡೆಯರ ಸ್ವಾಗತಿಸಿದರು ಮಲ್ಲಪ್ಪ ಪಾಟೀಲ ನಿರೂಪಿಸಿ ವಂದಿಸಿದರು.

# ಆರ್.ಡಿ.ಎಸ್ ಸಿ.ಬಿಎಸ್.ಇ. ಶಾಲೆ: 100ಕ್ಕೆ 100ರಷ್ಟು ಫಲಿತಾಂಶ



**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದ ಆರ್ ಡಿ ಎಸ್ ವಿದ್ಯಾನಿಕೇತನ ಸಿ. ಬಿ. ಎಸ್. ಇ .ಶಾಲೆಯ 10ನೇ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ಸತತ ಮೂರನೇ ಬಾರಿ ನೂರಕ್ಕೆ ನೂರರಷ್ಟು ಫಲಿತಾಂಶ ಪಡೆದುಕೊಂಡಿದೆ ಎಂದು ಪ್ರಾಂಶುಪಾಲ ದ್ರಾಕ್ಷಾಯಿಣಿ ಮಠಪತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ ನೀರಜ್ ಗಾಡವಿ ಶೇ.91.2 ಅಂಕ ಪಡೆದು ಶಾಲೆಗೆ ಪ್ರಥಮ, ಫಾತಿಮಾ ನದಾಫ್ ಶೇ.90 ಅಂಕ ಪಡೆದು ದ್ವಿತೀಯ, ಪೂರ್ಣಿಮಾ ಗಾಡವಿ ಶೇ.87 ಅಂಕ ಪಡೆದು ತೃತೀಯ, ಪ್ರಜ್ವಲ್ ಬಿದರಿ ಶೇ 83 ಅಂಕ ಪಡೆದು ನಾಲ್ಕನೇ ಸ್ಥಾನ ಪಡೆದುಕೊಂಡಿದ್ದಾರೆ. ಪರೀಕ್ಷೆ ಬರೆದ 9 ವಿದ್ಯಾರ್ಥಿಗಳಲ್ಲಿ 5 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಮತ್ತು ನಾಲ್ಕು ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಎಲ್ಲ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷ ಸಂತೋಷ್ ಪಾರ್ಶಿ ಮತ್ತು ಉಪಾಧ್ಯಕ್ಷೆ ಪೂಜಾ ಪಾರ್ಶಿ ಪ್ರಾಂಶುಪಾಲ ದ್ರಾಕ್ಷಾಯಿಣಿ ಮಠಪತಿ ಶಾಲಾ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳನ್ನು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ಗದಗ ಐಎಂಎ ಶತಮಾನೋತ್ಸವದ ಪ್ರಯುಕ್ತ ಮಕ್ಕಳಿಗೆ ಉಚಿತ ಖಗೋಳ ವೀಕ್ಷಣೆ

## ತಾರಾಲಯ ವೀಕ್ಷಣೆಯು ಬ್ರಹ್ಮಾಂಡದ ವೈಜ್ಞಾನಿಕ ಅರಿವು ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ



**ಬೆಳಗಾವಿ ವಾರ್ತೆ ಗದಗ:** ಗದಗ ಐಎಂಎ ಶತಮಾನೋತ್ಸವದ ಪ್ರಯುಕ್ತ ಮಕ್ಕಳಿಗೆ ಉಚಿತ ಖಗೋಳ ವೀಕ್ಷಣೆಗೆ ಏಪ್ರಿಲ್ 15 ರಿಂದ ಮೇ 3 ರವರೆಗೆ ಅವಕಾಶ ಕಲ್ಪಿಸಲಾಗಿದೆ. ತಾರಾಲಯ ವೀಕ್ಷಣೆಯು ಬ್ರಹ್ಮಾಂಡದ ವೈಜ್ಞಾನಿಕ ಅರಿವು ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ ತಿಳಿಸಿದರು.

ಗದಗ ಬೆಟಗೇರಿಯ ತಾರಾಲಯದಲ್ಲಿ ಬುಧವಾರ ಗದಗ ಜಿಲ್ಲಾ ಪಂಚಾಯತ್ , ಶಾಲಾ ಶಿಕ್ಷಣ ಇಲಾಖೆ ಐಎಂಎ ಸಂಸ್ಥೆಯ ಶತಮಾನೋತ್ಸವ ಪ್ರಯುಕ್ತ ಮಕ್ಕಳಿಗೆ ಖಗೋಳ ವೀಕ್ಷಣೆ 'ವಿಸ್ಮಯ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನವು ಮಾನವನ ಜೀವನವನ್ನು ಆರಾಮದಾಯಕವಾಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಅದನ್ನು ಜವಾಬ್ದಾರಿಯುತವಾಗಿ ಬಳಸಿದಾಗ ಮಾನವಕುಲದ ಪ್ರಗತಿಯಾಗುತ್ತದೆ. ಗದಗ ಜಿಲ್ಲೆಯ ಮಕ್ಕಳಿಗೆ ಹಾಗೂ ಸಾರ್ವಜನಿಕಿಗೆ ಉಪಯೋಗವಾಗಲೆಂದು ಗದಗ ಬೆಟಗೇರಿಯಲ್ಲಿ ತಾರಾಲಯವನ್ನು ನಿರ್ಮಿಸಲಾಗಿದ್ದು ಮಕ್ಕಳು ರಚನಾತ್ಮಕ ಚಟುವಟಿಕೆಯಲ್ಲಿ ಭಾಗವಹಿಸಲು ಅನುಕೂಲವಾಗುತ್ತದೆ ಎಂದರು.

ಐಎಂಎ ಶಾಖೆಯು ಶತಮಾನೋತ್ಸವದ ಪ್ರಯುಕ್ತ ಉಚಿತವಾಗಿ ಪ್ರಾಥಮಿಕ ಶಾಲೆಯ ಮಕ್ಕಳಿಂದ ಪಿಯುಸಿ ವಿದ್ಯಾರ್ಥಿಗಳಿಗೆ ಉಚಿತವಾಗಿ ವಿಸ್ಮಯ ಪ್ರದರ್ಶನವನ್ನು ಏಪ್ರಿಲ್ 15 ರಿಂದ ಮೇ 3 ರವರೆಗೆ ಏರ್ಪಡಿಸಲಾಗಿದೆ. ಸಾರ್ವಜನಿಕರಿಗೆ ರೂ.50/– ಪ್ರವೇಶ ದರ ನಿಗದಿಪಡಿಸಿದೆ. 60 ನಿಮಿಷಗಳ ಬಾಹ್ಯಾಕಾಶದ ವೀಕ್ಷಣೆಯು ವಾರದ ಪ್ರತಿ ಸೋಮವಾರ ಹಾಗೂ ಮೇ –1 ಕಾರ್ಮಿಕ ದಿನಾಚರಣೆ ಪ್ರಯುಕ್ತ ರಜೆ ಇದ್ದು ಉಳಿದ ದಿನಗಳಂದು ರವಿವಾರ ಸೇರಿದಂತೆ ಬೆಳಿಗ್ಗೆ 9.30 ರಿಂದ ಸಂಜೆ 4.30 ಗಂಟೆಯವರೆಗೆ ಐದು ಪ್ರದರ್ಶನಗಳು ಜರುಗಲಿವೆ. 1 ನೇ ಪ್ರದರ್ಶನ ಬೆಳಿಗ್ಗೆ 9.30 ರಿಂದ 10.45 ಗಂಟೆಗೆ; 2 ನೇ ಪ್ರದರ್ಶನ ಮಧ್ಯಾಹ್ನ 11 ರಿಂದ ಮಧ್ಯಾಹ್ನ 12 ಗಂಟೆಯವರೆಗೆ, 3 ನೇ ಪ್ರದರ್ಶನ ಮಧ್ಯಾಹ್ನ 12.15 ರಿಂದ 1.15 ರವರೆಗೆ, 4 ನೇ ಪ್ರದರ್ಶನ ಮಧ್ಯಾಹ್ನ 2.15 ರಿಂದ 3.15 ರವರೆಗೆ, 5 ನೇ ಪ್ರದರ್ಶನ ಮಧ್ಯಾಹ್ನ 3.30 ಗಂಟೆಯಿಂದ 4.30 ಗಂಟೆಯವರೆಗೆ ಜರುಗಲಿವೆ ಎಂದರು.

ಮಕ್ಕಳಿಗೆ ಉಚಿತ ಮೃಗಾಲಯ ವೀಕ್ಷಣೆ : ಲಾಯನ್ಸ್ ಕ್ಲಬ್ ದವರು ಮಕ್ಕಳಿಗಾಗಿ 2 ಬಸ್‌ಗಳ ವ್ಯವಸ್ಥೆ ಕಲ್ಪಿಸಿದ್ದು ಮಕ್ಕಳು ತಾರಾಲಯದಿಂದ ಮೃಗಾಲಯಕ್ಕೆ ಬಂದು ಉಚಿತವಾಗಿ ಮೃಗಾಲಯದ ವೀಕ್ಷಣೆ ಮಾಡಬಹುದು. ಮೃಗಾಲಯದಲ್ಲಿ ವನ್ಯಮೃಗಗಳು, ಪಕ್ಷಿ ನಿಸರ್ಗದ ಸೊಬಗು ಸವಿದು ತದನಂತರ ಪುನ: ತಾರಾಲಯಕ್ಕೆ ಮಕ್ಕಳು ಬಂದು ತಲುಪಲು ವ್ಯವಸ್ಥೆ ಕಲ್ಪಿಸಲಾಗಿದೆ.

ಎಸ್‌ಎಸ್‌ಎಲ್‌ಸಿ ಸಾಧಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ : ಐಎಂಎದವರು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಧನೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ತಾಲೂಕಾವಾರು ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ 10,000/–, ದ್ವಿತೀಯ ಸ್ಥಾನ ಪಡೆದವರಿಗೆ 5 ಸಾವಿರ; ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ 3 ಸಾವಿರ ರೂ.ಗಳ ಪ್ರೋತ್ಸಾಹಧನ ನೀಡಲಿದ್ದಾರೆ ಎಂದು ಡಿಡಿಪಿಐ ಆರ್.ಎಸ್.ಬುರುಡಿ ತಿಳಿಸಿದರು.

ಐಎಂಎ ಅಧ್ಯಕ್ಷ ಶ್ರೀಧರ್ ಕುರಡಗಿ ಮಾತನಾಡಿ ಶಾಲಾ ಮಕ್ಕಳು ಸೇರಿದಂತೆ ಸಾರ್ವಜನಿಕರು ತಾರಾಲಯವನ್ನು ಭೇಟಿ ಮಾಡಿ ವೈಜ್ಞಾನಿಕ ತಿಳುವಳಿಕೆಯನ್ನು ಹೆಚ್ಚಿಸಿಕೊಳ್ಳಬೇಕು. ವಿಸ್ಮಯ ಕಾರ್ಯಕ್ರಮದಡಿ ತಾರಾಲಯ ವೀಕ್ಷಣೆಯಿಂದ ಮಕ್ಕಳಲ್ಲಿ ನಕ್ಷತ್ರಗಳು, ಗ್ರಹಗಳು, ಉಪಗ್ರಹಗಳು ಹಾಗೂ ಬ್ರಹ್ಮಾಂಡದ ರಹಸ್ಯಗಳ ಬಗ್ಗೆ ಕುತೂಹಲ ಹೆಚ್ಚುತ್ತದೆ. ಈ ಕುತೂಹಲವೇ ಅವರನ್ನು ಪ್ರಶ್ನಿಸಲು, ವಿಚಾರಿಸಲು ಮತ್ತು ತರ್ಕಬದ್ಧವಾಗಿ ಯೋಚಿಸಲು ಪ್ರೇರೇಪಿಸುತ್ತದೆ. ಮೂಢನಂಬಿಕೆಗಳನ್ನು ದೂರಮಾಡಿ ನೈಸರ್ಗಿಕ ಕ್ರಿಯೆಗಳಾದ ಗ್ರಹಣ, ನಕ್ಷತ್ರಗಳ ಚಲನೆ ಇತ್ಯಾದಿಗಳನ್ನು ವೈಜ್ಞಾನಿಕವಾಗಿ ಅರ್ಥಮಾಡಿಕೊಳ್ಳಲು ಸಹಾಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಾ. ಎಸ್.ಆರ್.ನಾಗನೂರ, ಶಿವಕುಮಾರ್ ಕುರಿ, ಎಂ.ಎಚ್.ಕಾಂಬಳೆ, ಆನಂದ ಪೋತ್ನೀಸ್, ವೆರ್ಣೇಕರ್ , ಡಾ. ರಶ್ಮಿ, ಎಂ.ಎ. ಯರಗುಡಿ ಮತ್ತಿತರರಿದ್ದರು.

# ವಿವಿಧ ಸ್ಪರ್ಧಾ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಧಾರವಾಡ:** ನಗರದ ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯ ವತಿಯಿಂದ ವಿಶ್ವಗುರು ಬಸವೇಶ್ವರರ 892 ನೇ ಹುಟ್ಟುಹಬ್ಬದ ನಿಮಿತ್ತವಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಪ್ರಕಾಶ ರಟಗೇರಿ ಷಟಸ್ಥಳ ಧ್ವಜಾರೋಹಣ ನೆರವೇರಿಸಿ ನಂತರ ಸಂಸ್ಥೆಯಿಂದ ಸನ್ಮಾನವನ್ನು ಸ್ವೀಕರಿಸಿ ಸಭೆಯನ್ನು ಉದ್ಧೇಶಿಸಿ ಮಾತನಾಡಿದರು.

ಒಳ್ಳೆಯ ಕಾಯಕ ಮಾಡುವುದರಿಂದ ಕೈಲಾಸವನ್ನು ಕಾಣಬಹುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದಂತಹ ಸಂಸ್ಥೆಯ ಕಾರ್ಯಾಧ್ಯಕ್ಷ ರಾಜಶೇಖರ ಬೆಳ್ಳಕ್ಕಿ ಇವರು ಮಾತನಾಡಿ, ಬಸವಣ್ಣನವರ ತತ್ವಗಳು ಇಂದಿನ ಸಮಾಜ ಸುಧಾರಣೆಗೆ ಅತ್ಯಂತ ಪ್ರಸ್ತುತವಾಗಿವೆ ಎಂದರು.

ಕಚೇರಿ ಅಧೀಕ್ಷಕರಾದ ಶಿವಲಿಂಗ ನೀಲಗುಂದ ಕಾರ್ಯಕ್ರಮ ಸಂಯೋಜನೆ ಮಾಡಿ ನಿರ್ವಹಿಸಿದರು. ಶ್ರೀಮತಿ ಪ್ರಜ್ಞಾನಡಕಟ್ಟಿ ಮತ್ತು ಶ್ರೀಮತಿ ಮಂಜುಳಾ ಪುರದಣ್ಣನವರ ಕಾರ್ಯಕ್ರಮದ ಪ್ರಾರಂಭದಲ್ಲಿ ಪ್ರಾರ್ಥನೆ ನಡೆಸಿಕೊಟ್ಟರು. ಲಿಂಗಣ್ಣ ತಳ್ಳಿ ವಂದನಾರ್ಪಣೆ ಮಾಡಿದರು.

# ಅಂಬೇಡ್ಕರ್–ಜಗಜೀವನ್ ರಾಮ್ ಜಯಂತಿ ಅಂಗವಾಗಿ ಪೌರಕಾರ್ಮಿಕರಿಗೆ ಸನ್ಮಾನ

## ಅಂಬೇಡ್ಕರ್ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ "ಉತ್ತಮ ಪೌರಕಾರ್ಮಿಕ" ಪ್ರಶಸ್ತಿ ವಿತರಣೆ




**ಬೆಳಗಾವಿ ವಾರ್ತೆ ಗದಗ:** ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಮಂತ್ರಿ ಡಾ. ಬಾಬು ಜಗಜೀವನ್ ರಾಮ್ ಅವರ ಜಯಂತಿ ಉತ್ಸವದ ಅಂಗವಾಗಿ ನಗರದ ಅಂಬೇಡ್ಕರ್ ಭವನದಲ್ಲಿ ಭಾವಪೂರ್ಣ ವೇದಿಕೆ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ವಿವಿಧ ನಗರಸಭೆ ಹಾಗೂ ಪುರಸಭೆಗಳಲ್ಲಿನ ಶ್ರಮಜೀವಿ ಪೌರಕಾರ್ಮಿಕರ ಸೇವೆಯನ್ನು ಗುರುತಿಸಿ "ಉತ್ತಮ ಪೌರಕಾರ್ಮಿಕ" ಪ್ರಶಸ್ತಿಯನ್ನು ವೇದಿಕೆಯಲ್ಲಿ ಉಪಸ್ಥಿತರಿದ್ದ ಗಣ್ಯರು ಪ್ರಧಾನ ಮಾಡಿ ಗೌರವಿಸಿದರು.

ಸಮಾಜದ ಸ್ವಚ್ಛತೆ ಮತ್ತು ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ತರವಾಗಿದ್ದು, ಅವರ ಸೇವೆ ಅಮೂಲ್ಯ ಎಂದು ಗಣ್ಯರು ತಮ್ಮ ಮಾತುಗಳಲ್ಲಿ ಅಭಿಪ್ರಾಯಪಟ್ಟರು.

**ಪ್ರಶಸ್ತಿ ಪಡೆದ ಪೌರಕಾರ್ಮಿಕರು:** ಮುದಕಪ್ಪ ಬಚ್ಚೇನಹಳ್ಳಿ – ಪುರಸಭೆ ಮುಂಡರಗಿ, ಮರಿಯಪ್ಪ ಬಾನಪ್ಪ ಗುಡಿಮನಿ – ಪಟ್ಟಣ ಪಂಚಾಯತ್ ಶಿರಹಟ್ಟಿ, ದುರುಗಪ್ಪ ಪಾದಗಟ್ಟಿ – ಪಟ್ಟಣ ಪಂಚಾಯತ್ ನರೇಗಲ್ಲ, ಬಸವರಾಜ ಎಸ್. ಜೋಗಣ್ಣವರ್ – ಪುರಸಭೆ ರೋಣ, ಮಹೇಶ್ ಎಮ್. ಚಲವಾದಿ – ಪುರಸಭೆ ನರಗುಂದ, ದಾವಲಪ್ಪ ತಾಯಿ ದ್ಯಾಮವ್ವ ನಡೇಗೇರಿ – ಪಂಚಾಯತ್ ಮುಳಗುಂದ,

ರೇಣಪ್ಪ ಕಮತದ – ಪುರಸಭೆ ಲಕ್ಷ್ಮೇಶ್ವರ, ಶಿವಪ್ಪ ಮಾದರ – ಪುರಸಭೆ ಗಜೇಂದ್ರಗಡ

ಅಶೋಕ್ ಚಲವಾದಿ – ಗದಗ–ಬೆಟಗೇರಿ ನಗರಸಭೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001